ವಿಶ್ವವಾಣಿ
ವಿಶ್ವಾಸವೇ ವಿಶ್ವ

ಬಾಹ್ಯಾಕಾಶದಿಂದ ಮರಳಿದ ಗಗನಯಾನಿ **ಶುಭಾಂಶು ಶುಕ್ಲಾ** ಅವರು ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ, ಬಾಹ್ಯಾಕಾಶಕ್ಕೆ ಕೊಂಡೊಯ್ದಿದ್ದ ತಿರಂಗಾವನ್ನು ಉಡುಗೊರೆಯಾಗಿ ನೀಡಿದರು.

ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟದಿಂದ ಉಪರಾಷ್ಟ್ರಪತಿ ಅಭ್ಯರ್ಥಿಯಾಗಿ ನಾಮ ನಿರ್ದೇಶನವಾದ ಬೆನ್ನಲ್ಲೇ **ಸಿ.ಪಿ.ರಾಧಾಕೃಷ್ಣನ್** ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಸೋಮವಾರ ಭೇಟಿಯಾದರು.

ವಾಂಗ್ ಯಿ -ದೋವಲ್ ಇಂದು ಗಡಿ ಮಾತುಕತೆ

ದೆಹಲಿ: ಗಡಿ ವಿಷಯಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಜತೆ ಮಾತುಕತೆ ನಡೆಸುವ ಸಂಬಂಧ ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಅವರು ಭಾರತಕ್ಕೆ 2 ದಿನಗಳ ಪ್ರವಾಸ ಕೈಗೊಂಡಿದ್ದಾರೆ. ಸೋಮವಾರ ದೆಹಲಿ ವಿಮಾನ ನಿಲ್ದಾಣದಲ್ಲಿ ವಾಂಗ್ ಯಿ ಅವರನ್ನು ವಿದೇಶಾಂಗ ಸಚಿವಾಲಯದ ಪೂರ್ವ ಏಷ್ಯಾ ವಿಭಾಗದ ಜಂಟಿ ಕಾರ್ಯದರ್ಶಿ ಗೌರಂಗ ಲಾಲ್‌ದಾಸ್ ಸ್ವಾಗತಿಸಿದರು. ವಾಂಗ್ ಯಿ ಮತ್ತು ದೋವಲ್ ಅವರು ಮಂಗಳವಾರ ಮಾತುಕತೆ ನಡೆಸಲಿದ್ದಾರೆ. ಇದು 24ನೇ ಸುತ್ತಿನ ಚರ್ಚೆಯಾಗಿದೆ.

10 ವರ್ಷಗಳಲ್ಲಿ ₹ 130 ಲಕ್ಷ ಕೋಟಿ ಸಾಲ ಹೆಚ್ಚಳ

ದೆಹಲಿ: ಕೇಂದ್ರ ಸರಕಾರದ ಸಾಲ ಕಳೆದ 10 ವರ್ಷಗಳಲ್ಲಿ ₹130 ಲಕ್ಷ ಕೋಟಿ ಹೆಚ್ಚಳ ಆಗಿದೆ. ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಸಂಸದ ಡಾ.ಎಂ.ಕೆ. ವಿಷ್ಣು ಪ್ರಸಾದ್ ಕೇಳಿದ ಪ್ರಶ್ನೆಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೀಡಿರುವ ಉತ್ತರದಲ್ಲಿ ಈ ಮಾಹಿತಿ ಇದೆ. 2015– 16ರಲ್ಲಿ ಕೇಂದ್ರದ ಸಾಲವು ₹70.98 ಲಕ್ಷ ಕೋಟಿ ಆಗಿತ್ತು. 2025–26ರಲ್ಲಿ ₹200.16 ಲಕ್ಷ ಕೋಟಿಗೆ ಜಿಗಿದಿದೆ. ಕೇಂದ್ರವು ಈ ವರ್ಷ ₹4.61 ಲಕ್ಷ ಕೋಟಿ ಸಾಲ ಮರುಪಾವತಿ ಮಾಡಿದೆ. ಒಟ್ಟು ಸಾಲಕ್ಕೆ ಈ ವರ್ಷ ಪಾವತಿಸುತ್ತಿರುವ ಬಡ್ಡಿ ₹12.76 ಲಕ್ಷ ಕೋಟಿ.

ಅಗೆದಿರುವ ಗುಂಡಿಗಳ ವರದಿ ಬರುವ ತನಕ ಹೊಸ ಗುಂಡಿ ಅಗೆಯಲ್ಲ: ಪರಂ ರಾಜ್ಯ ಸರಕಾರದ ಹಾರಿಕೆ ಉತ್ತರಕ್ಕೆ ಬಿಜೆಪಿ ಸದಸ್ಯರಿಂದ ಆಕ್ಷೇಪ, ಸಭಾತ್ಯಾಗ

ಗುಂಡಿ ಅಗೆತಕ್ಕೆ ತಾತ್ಕಾಲಿಕ ಬ್ರೇಕ್

ವಿಶ್ವವಾಣಿ ಸುದ್ದಿಮನೆ ವಿಧಾನಸಭೆ

ರಾಷ್ಟ್ರಾದ್ಯಂತ ಭಾರಿ ಸದ್ದಾಗಿದ್ದ ಬುರುಡೆ ಪ್ರಕರಣದ ತನಿಖೆಗೆ ತಾತ್ಕಾಲಿಕ ಬ್ರೇಕ್ ಬಿದ್ದಿದ್ದು, ಈಗಾಗಲೇ ಎಫ್‌ಎಸ್‌ಎಲ್‌ಗೆ ಕಳುಹಿಸಿರುವ ಮಾದರಿಯ ಫಲಿತಾಂಶ ಬರುವ ತನಕ ಹೊಸ ಗುಂಡಿ ತೆಗೆಯುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಸ್ಪಷ್ಟಪಡಿಸಿದರು.

ವಿಧಾನಸಭೆಯಲ್ಲಿ ಸೋಮವಾರ ಮಧ್ಯಾಹ್ನ ವಿಶೇಷ ತನಿಖಾ ತಂಡದ ರಚನೆಯನ್ನು ಸಮರ್ಥಿಸಿಕೊಳ್ಳುವ ಜತೆಜತೆಗೆ ಹೊಸ ಗುಂಡಿಗಳನ್ನು ಅಗೆಯುವುದಿಲ್ಲ ಎನ್ನುವ ಮೂಲಕ ಅಡ್ಡ ಗೋಡೆಯ ಮೇಲೆ ದೀಪ ಇಡುವ ಪ್ರಯತ್ನ ಮಾಡಿದರು. ಆದರೆ ಪರಮೇಶ್ವರ ಹೇಳಿಕೆಗೆ ಬಿಜೆಪಿ ಶಾಸಕರು ಆಕ್ಷೇಪ ವ್ಯಕ್ತಪಡಿಸಿದ್ದು, ಎಸ್‌ಐಟಿ ರಚನೆ ಹಿಂದಿರುವ ಶಕ್ತಿ ಯಾವುದು? ಅನಾಮಧೇಯ ವ್ಯಕ್ತಿಯ ಹಿಂದಿರುವ ಷಡ್ಯಂತ್ರವೇನು? ಎನ್ನುವ ಬಗ್ಗೆ ಗೃಹ ಸಚಿವರು ಸ್ಪಷ್ಟನೆ ನೀಡಬೇಕು ಎಂದು ಪಟ್ಟು ಹಿಡಿದರು. ಈ ವೇಳೆ ಆಡಳಿತ–ಪ್ರತಿಪಕ್ಷ ಶಾಸಕರ ನಡುವೆ ಮಾತಿಗೆ ಮಾತು ಬೆಳೆದು ಕೆಲಕಾಲ ಸಭೆಯನ್ನು ಮುಂದೂಡಲಾಗಿತ್ತು. ಬಳಿಕ ವಿಧಾನಸಭೆ ನಡೆದಾಗಲೂ, ಸರಕಾರದ ನಡೆಯನ್ನು ಖಂಡಿಸಿ ಪ್ರತಿಪಕ್ಷ ಸದಸ್ಯರು ಸಭಾತ್ಯಾಗ ಮಾಡಿದರು. → 4

ಬಿಜೆಪಿ ಶಾಸಕರ ಆಕ್ಷೇಪ

ವಿಶೇಷ ತನಿಖಾ ತಂಡದಿಂದ ಮಧ್ಯಂತರ ವರದಿಯ ನಿರೀಕ್ಷೆಯಲ್ಲಿದ್ದ ಬಿಜೆಪಿ ನಾಯಕರು, ಪರಮೇಶ್ವರ ಅವರ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದರು. ಯಾರ ಷಡ್ಯಂತ್ರವಿದೆ ಎನ್ನುವ ಬಗ್ಗೆ ಯಾವುದೇ ಪ್ರಸ್ತಾಪವಿಲ್ಲ. ಎಸ್‌ಐಟಿಗೆ ನಮ್ಮ ವಿರೋಧವಿಲ್ಲ. ಆದರೆ ಇದರ ಹೆಸರಲ್ಲಿ ಧರ್ಮಸ್ಥಳಕ್ಕೆ ಮಾಡುತ್ತಿರುವ ಅನ್ಯಾಯವನ್ನು ತಡೆಗಟ್ಟಲು ಸರಕಾರ ಏಕೆ ಸೂಚನೆ ನೀಡುತ್ತಿಲ್ಲ? ಸಾಮಾಜಿಕ ಜಾಲತಾಣಗಳಲ್ಲಿ ಬರುವ ಪೋಸ್ಟ್‌ಗಳ ವಿರುದ್ಧ ಕ್ರಮ ಏಕೆ ತೆಗೆದುಕೊಂಡಿಲ್ಲ? ಮುಸುಕುಧಾರಿಯ ಹಿಂದಿರುವ ಶಕ್ತಿಗಳೇನು? ಹಣಕಾಸು ನೆರವು ಎಲ್ಲಿಂದ ಬರುತ್ತಿದೆ? ಇದರ ಬಗ್ಗೆ ಸರಕಾರದ ನಡೆಯೇನು? ಎನ್ನುವ ಬಗ್ಗೆ ಮಾಹಿತಿ ನೀಡಬೇಕು ಎಂದು ಆಗ್ರಹಿಸಿದರು.

ಪರಮೇಶ್ವರ ಹೇಳಿದ್ದೇನು?

- ವಿಶೇಷ ತನಿಖಾ ತಂಡದಿಂದ ಯಾವುದೇ ಮಧ್ಯಂತರ ವರದಿ ಬಂದಿಲ್ಲ
- ಧರ್ಮಸ್ಥಳ ಬುರುಡೆ ಪ್ರಕರಣದಲ್ಲಿ ಸರಕಾರಕ್ಕೆ ಯಾವುದೇ ಹಿತಾಸಕ್ತಿ ಇಲ್ಲ
- ವೀರೇಂದ್ರ ಹೆಗ್ಗಡೆ ಕುಟುಂಬದ ವಿರುದ್ಧದ ಆರೋಪದ ಸತ್ಯ ಹೊರಬರಬೇಕಿದೆ
- ಯಾರ ಒತ್ತಡಕ್ಕೂ ಮಣಿದು ರಾಜ್ಯ ಸರಕಾರ ಎಸ್‌ಐಟಿ ರಚನೆ ಮಾಡಿಲ್ಲ

ಲಾಯರ್ ಜಗದೀಶ್‌ಗೆ ಸಂಕಷ್ಟ

ರಾಜಕಾರಣಿಗಳು ಸೇರಿದಂತೆ ಎಲ್ಲರ ವಿರುದ್ಧ ಏಕವಚನದಲ್ಲಿ ವಾಗ್ದಾಳಿ ನಡೆಸುವ ಮೂಲಕವೇ ಸಾಮಾಜಿಕ ಜಾಲತಾಣದಲ್ಲಿ ಕಾಣಿಸಿಕೊಳ್ಳುತ್ತಿದ್ದ ಲಾಯರ್ ಜಗದೀಶ್ ವಿರುದ್ಧ ಮಂಡಿಸಿದ ಹಕ್ಕುಚ್ಯುತಿಯನ್ನು ಒಪ್ಪಿರುವ ಸದನ ಹಕ್ಕುಬಾಧ್ಯತಾ ಸಮಿತಿಗೆ ರವಾನಿಸಲು ತೀರ್ಮಾನಿಸಿದೆ.

ಅನಾಮಿಕ ತಪ್ಪೊಪ್ಪಿಗೆ?

ಬುರುಡೆ ರಹಸ್ಯ

ವಿಧಾನಸಭೆ ಹಾಗೂ ಪರಿಷತ್‌ನಲ್ಲಿ ಈ ವಿಷಯಕ್ಕೆ ಸಂಬಂಧಿಸಿದಂತೆ ಪರ–ವಿರೋಧ ಚರ್ಚೆಯ ಸಮಯದಲ್ಲಿಯೇ, ಧರ್ಮಸ್ಥಳದಲ್ಲಿರುವ ಎಸ್‌ಐಟಿ ಮುಂದೆ ಅನಾಮಧೇಯ ವ್ಯಕ್ತಿ ತಪ್ಪೊಪ್ಪಿ ಕೊಂಡಿದ್ದಾನೆ ಎನ್ನುವ ಮಾತುಗಳು ಪ್ರಕರಣಕ್ಕೆ ಭಾರಿ ಟ್ವಿಸ್ಟ್ ನೀಡಿದೆ.

ಮೂಲಗಳ ಪ್ರಕಾರ, 'ಒತ್ತಡಕ್ಕೆ ಒಳಗಾಗಿ ಸುಳ್ಳು ಹೇಳಿಕೆ ದಾಖಲಿಸಿದ್ದೇನೆ' ಎಂದು ಎಸ್‌ಐಟಿ ಮುಂದೆ ಹೇಳಿದ್ದಾನೆ ಎನ್ನಲಾಗಿದೆ. ಆದರೆ ಈ ವಿಷಯಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ಅಥವಾ ಸರಕಾರದಿಂದ ಯಾವುದೇ ಅಧಿಕೃತ ಹೇಳಿಕೆ ಬಿಡುಗಡೆಯಾಗಿಲ್ಲ. ಅನಾಮಧೇಯ ವ್ಯಕ್ತಿ, 2014ರಲ್ಲಿ ಧರ್ಮಸ್ಥಳವನ್ನು ತೊರೆದು ತಮಿಳುನಾಡಿನಲ್ಲಿ ನೆಲೆಸಿದ್ದ. → 4

ತಿಮರೋಡಿ ವಿರುದ್ಧ ಕ್ರಮಕ್ಕೆ ಸೂಚನೆ

ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಸೌಜನ್ಯಾ ಪರ ಹೋರಾಟದಲ್ಲಿ ಮುಂಚೂಣಿಯಲ್ಲಿ ಗುರುತಿಸಿಕೊಂಡಿದ್ದ ಮಹೇಶ್ ತಿಮರೋಡಿ ಬಂಧನಕ್ಕೆ ಗೃಹ ಸಚಿವಾಲಯ ಆದೇಶ ನೀಡಿದೆ ಎಂದು ಹೇಳಲಾಗಿದೆ. ಸೌಜನ್ಯಾ ಪರ ಹೋರಾಟದಲ್ಲಿ ಗುರುತಿಸಿಕೊಂಡಿದ್ದ ಮಹೇಶ್ ಶೆಟ್ಟಿ ತಿಮರೋಡಿ ಸಾಮಾಜಿಕ ಜಾಲತಾಣದಲ್ಲಿ ನಾಲಿಗೆ ಹರಿಬಿಟ್ಟಿದ್ದು, ಬಂಧಿಸುವಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಂಗಳೂರು ಪೊಲೀಸ್ ಆಯುಕ್ತರಿಗೆ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

ಸೊಂಪಾದ ಪುಟಗಳು

ಬುರುಡೆ ಪ್ರಕರಣದಲ್ಲಿ ಕೊನೆಗೆ ಸಿಕ್ಕಿದ್ದೇನು?
ಅಶ್ವತ್ಥಕಟ್ಟೆ
ರಂಜಿತ್ ಎಚ್. ಅಶ್ವತ್ಥ 6

ಅದೇ ಭೂಮಿ, ಆಕಾಶ; ಬದುಕಿನಲ್ಲೆಷ್ಟು ವ್ಯತ್ಯಾಸ!
ವಿಶ್ವರಂಗ
ರಂಗಸ್ವಾಮಿ ಮೂಕನಹಳ್ಳಿ 7

ದಾರಿದೀಪೋಕ್ತಿ

ನಾನು ಹಾರಬೇಕಾ ಬೇಡವಾ ಎಂದು ಯಾರ ಅನುಮತಿಯನ್ನೂ ಕೇಳಬೇಕಿಲ್ಲ. ರೆಕ್ಕೆ ನಿಮ್ಮದು, ಆಸೆ ನಿಮ್ಮದು. ಆಕಾಶವಂತೂ ಯಾರಿಗೂ ಸೇರಿದ್ದಲ್ಲ. ಹೀಗಿರುವಾಗ ಹಾರದೇ ಇರುವುದೇ ಅಪರಾಧ.

ವಕ್ರತುಂಡೋಕ್ತಿ



ನಾಳೆಯೂ ನಾನು ಸುಸ್ತಾಗಿದ್ದೇನೆ ಎಂದು ಭಾವಿಸುವುದು ನಿಜವಾದ ಆಲಸ್ಯ.

ತುಮಕೂರಿಗೆ 4 ರೈಲು ಮಾರ್ಗ: ಸೋಮಣ್ಣ

ತುಮಕೂರು: ವೇಗವಾಗಿ ಬೆಳೆಯುತ್ತಿರುವ ತುಮಕೂರು ನಗರ ಹಾಗೂ ಸುತ್ತಲಿನ ಪ್ರದೇಶ, ರೈಲು ಪ್ರಮಾಣ ಅವಲಂಬನೆ ಹೆಚ್ಚಾಗುವ ಭವಿಷ್ಯದ ದೃಷ್ಟಿಯಿಂದ ತುಮಕೂರು– ಬೆಂಗಳೂರು ನಡುವೆ ನಾಲ್ಕು ರೈಲು ಮಾರ್ಗ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗುತ್ತಿದೆ. ಈ ಮೂಲಕ ಹೆಚ್ಚುವರಿ ರೈಲುಗಳ ಸೇವೆ ಒದಗಿಸಲಾಗುತ್ತಿದೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ಸಹಾಯಕ ಸಚಿವ ವಿ.ಸೋಮಣ್ಣ ತಿಳಿಸಿದರು.

ಬುರುಡೆ ಪ್ರಕರಣ ಸದನದಲ್ಲಿ ಕೋಲಾಹಲ

ವಿವರಪುಟ → 5

ಎಸ್‌ಸಿ, ಎಸ್‌ಟಿ, ಒಬಿಸಿ ಮಹಿಳೆಯರಿಗೆ ಮೀಸಲು

ಸಹಕಾರ ಸಂಘದಲ್ಲಿ ಇನ್ಮುಂದೆ ಮೀಸಲು

ವಿಶ್ವವಾಣಿ ಸುದ್ದಿಮನೆ ವಿಧಾನಸಭೆ

ಬಹುನಿರೀಕ್ಷಿತ ಸಹಕಾರ ಸಂಘಗಳ ತಿದ್ದುಪಡಿ ವಿಧೇಯಕಕ್ಕೆ ಸೋಮವಾರ ಅನುಮೋದನೆ ದೊರಕಿದ್ದು, ಈ ಮೂಲಕ ಸಹಕಾರ ಸಂಘಗಳಲ್ಲಿಯೂ ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗ ಹಾಗೂ ಮಹಿಳೆಯರಿಗೆ ಮೀಸಲು ದೊರೆಕಿದೆ.

ವಿಧಾನಸಭೆಯಲ್ಲಿ ಸೋಮವಾರ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ವಿಧೇಯಕವನ್ನು ಮಂಡಿಸಿದರು.

ತಿದ್ದುಪಡಿ ವಿಧೇಯಕದಲ್ಲಿ, ಸಹಕಾರ ಸಂಘಗಳ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಇನ್ನು ಮುಂದೆ ಅನುಸೂಚಿತ ಜಾತಿ, ಬುಡಕಟ್ಟು ಸಮುದಾಯ, ಮಹಿಳೆ ಹಾಗೂ ಹಿಂದುಳಿದವರಿಗೆ ಮೀಸಲಾತಿ ದೊರೆಯಲಿದೆ.ಇದಿಷ್ಟೇ ಅಲ್ಲದೇ, ಪ್ರತಿ ಸಹಕಾರ ಸಂಘಕ್ಕೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ತಲಾ ಒಬ್ಬರನ್ನು ಸರಕಾರ ನಾಮ ನಿರ್ದೇಶನ ಮಾಡುವುದಕ್ಕೂ ಅವಕಾಶ ಮಾಡಿಕೊಳ್ಳಲಾಗಿದೆ. → 4

ಇದು ಸಹಕಾರ ರಂಗದ ಮೇಲೆ ಸರಕಾರದ ನೇರ ಹಸ್ತಕ್ಷೇಪ. ನೆಹರೂ, ಲಾಲ್ ಬಹದ್ದೂರ ಶಾಸ್ತ್ರಿ ಅವರ ಕನಸಿನ ಸಹಕಾರ ರಂಗದ ಉತ್ತೇಜನಕ್ಕೆ ಸರಕಾರ ತಿಲಾಂಜಲಿ ಇಟ್ಟಿದೆ. ಇದರ ಬದಲಾಗಿ ಸಹಕಾರ ಕ್ಷೇತ್ರವನ್ನೇ ಮುಚ್ಚಿಬಿಡಿ.
-ಜಿ.ಟಿ.ದೇವೇಗೌಡ ಜೆಡಿಎಸ್ ಶಾಸಕ

ಸರಕಾರದಿಂದ ಲೆಕ್ಕಪರಿಶೋಧನೆ ಮಾಡಿಸುವುದು, ನಿರ್ದೇಶಕರು ಪ್ರತಿ ವರ್ಷ ಆಸ್ತಿ ಘೋಷಣೆ ಮಾಡಬೇಕು ಎಂಬುದು ಅಪ್ರಾಯೋಗಿಕ. ಆದ್ದರಿಂದ ಇದನ್ನು ತಡೆಹಿಡಿದು ಅಧ್ಯಯನಕ್ಕೆ ಸಮಿತಿ ರಚಿಸಿ, ನಂತರ ಜಾರಿಗೊಳಿಸಿ.
ಆರಗ ಜ್ಞಾನೇಂದ್ರ, ಶಾಸಕ

ಅಪ್ರಾಪ್ತರಿಗೆ ನಿಶ್ಚಿತಾರ್ಥ ಮಾಡಿದರೆ ಜೈಲು

ಮತ್ತೊಂದು ಮಹತ್ವದ ಬೆಳವಣಿಗೆಯಲ್ಲಿ ಅಪ್ರಾಪ್ತ ವಯಸ್ಕರ ವಿವಾಹ ನಿಶ್ಚಿತಾರ್ಥ ನಿಷೇಧಿಸುವ ಹಾಗೂ ಈ ಅಪರಾಧಕ್ಕೆ ಎರಡು ವರ್ಷ ಕಠಿಣ ಶಿಕ್ಷೆ ಮತ್ತು ಒಂದು ಲಕ್ಷ ರುಪಾಯಿ ದಂಡ ವಿಧಿಸುವ ತಿದ್ದುಪಡಿಯನ್ನು ಬಾಲ್ಯ ವಿವಾಹ ನಿಷೇಧ ಕಾಯಿದೆ ತರಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿಧೇಯಕ ಮಂಡಿಸಿ, ಬಾಲ್ಯ ವಿವಾಹ ಪಿಡುಗು ಬೇರು ಸಮೇತ ದೂರವಾಗಿಲ್ಲ ಎಂದರು.

54 ಲಕ್ಷ ಜನ್‌ಧನ್ ಖಾತೆ ನಿಷ್ಕ್ರಿಯ

ದೆಹಲಿ: ಪ್ರಧಾನಮಂತ್ರಿ ಜನ್‌ಧನ್ ಯೋಜನೆಯಡಿ ಕರ್ನಾಟಕದಲ್ಲಿ ತೆರೆಯಲಾಗಿದ್ದ ₹2.08 ಕೋಟಿ ಖಾತೆಗಳ ಪೈಕಿ 54 ಲಕ್ಷ ಖಾತೆಗಳು ನಿಷ್ಕ್ರಿಯವಾಗಿವೆ ಎಂದು ಕೇಂದ್ರ ಹಣಕಾಸು ಸಚಿವಾಲಯವು ಲೋಕಸಭೆಗೆ ಸೋಮವಾರ ತಿಳಿಸಿದೆ.

ದೇಶದಲ್ಲಿ ಜುಲೈ 31ರವರೆಗೆ ಒಟ್ಟು 56.04 ಕೋಟಿ ಜನ್‌ಧನ್ ಖಾತೆಗಳನ್ನು ತೆರೆಯಲಾಗಿದೆ. ಈ ಪೈಕಿ, ₹13.04 ಲಕ್ಷ ಖಾತೆಗಳು ನಿಷ್ಕ್ರಿಯವಾಗಿವೆ. ರಿಸರ್ವ್ ಬ್ಯಾಂಕ್ 2009ರಲ್ಲಿ ಹೊರಡಿಸಿದ ಮಾರ್ಗಸೂಚಿಗಳ ಪ್ರಕಾರ, 2 ವರ್ಷಗಳಿಗಿಂತ ಹೆಚ್ಚು ಕಾಲ ಖಾತೆಯಲ್ಲಿ ಯಾವುದೇ ವಹಿವಾಟು ನಡೆಯದಿದ್ದರೆ ಉಳಿತಾಯ ಖಾತೆಯನ್ನು ನಿಷ್ಕ್ರಿಯ ಎಂದು ಪರಿಗಣಿಸಬೇಕು ಎಂದು ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಅವರು ಸದನಕ್ಕೆ ತಿಳಿಸಿದರು. ನೇರ ನಗದು ವರ್ಗಾವಣೆಯಂತಹ ಸರಕಾರದ ವಿವಿಧ ಯೋಜನೆಗಳ ಮೊತ್ತವನ್ನು ಜನ್‌ಧನ್ ಖಾತೆ ಸೇರಿ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತದೆ. ಈ ಮೊತ್ತವನ್ನು ನಿಷ್ಕ್ರಿಯ ಖಾತೆಗಳಿಗೂ ವರ್ಗಾಯಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು. ಖಾತೆ ನಿಷ್ಕ್ರಿಯಗೊಳ್ಳುವ ಬಗ್ಗೆ ಬ್ಯಾಂಕುಗಳು ಖಾತೆದಾರರಿಗೆ ಲಿಖಿತ ಮಾಹಿತಿ ನೀಡುತ್ತವೆ ಎಂದರು.

ಆ ದಿನಗಳು

ಬೆಂಗಳೂರಿನ ಹೆಬ್ಬಾಳದಲ್ಲಿ ನಿರ್ಮಿಸಲಾದ ನೂತನ ಮೇಲ್ಸೇತುವೆಯನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಿದರು. ಈ ವೇಳೆ ಡಿ.ಕೆ.ಶಿವಕುಮಾರ್ ಅವರು ಮೇಲ್ಸೇತುವೆಯಲ್ಲಿ ತಮ್ಮ ಹಳೆಯ ಬೈಕ್ ಓಡಿಸಿ, ಕಾಲೇಜು ದಿನಗಳನ್ನು ಮೆಲುಕು ಹಾಕಿದರು.

ದರ್ಶನ್ ಬೇರೆ ಜೈಲಿಗೆ ಶಿಫ್ಟ್ ವಿಚಾರಣೆ ಮುಂದೂಡಿಕೆ

ಬೆಂಗಳೂರು: ನಟ ದರ್ಶನ್ ಅವರನ್ನು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವುದಕ್ಕೆ ಸಂಬಂಧಿಸಿದಂತೆ ಸಲ್ಲಿಕೆಯಾದ ಅರ್ಜಿಯ ವಿಚಾರಣೆಯನ್ನು ಸಿಸಿಎಚ್ 64ನೇ ನ್ಯಾಯಾಲಯ ಆಗಸ್ಟ್ 23ಕ್ಕೆ ಮುಂದೂಡಿತು.

'ಬೇರೆ ಕಾರಾಗೃಹಕ್ಕೆ ಸ್ಥಳಾಂತರ ಮಾಡುವುದಾದರೆ ನಮ್ಮ ವಾದವನ್ನೂ ಆಲಿಸಬೇಕು' ಎಂದು ಆಗಸ್ಟ್ 14ರಂದೇ ದರ್ಶನ್ ಪರ ವಕೀಲರು ನ್ಯಾಯಾಲಯದಲ್ಲಿ ಮನವಿ ಮಾಡಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಧೀಶರು, ದರ್ಶನ್ ಪರ ವಕೀಲರಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿ ಮುಂದಿನ ವಿಚಾರಣೆಯನ್ನು ಆಗಸ್ಟ್ 23ಕ್ಕೆ ಮುಂದೂಡಿದರು.

ವಿಜಯಲಕ್ಷ್ಮಿ ಭೇಟಿ

ವಿಜಯಲಕ್ಷ್ಮಿ ಅವರು ಪರಪ್ಪನ ಅಗ್ರಹಾರ ಕಾರಾಗೃಹಕ್ಕೆ ಸೋಮವಾರ ಸಂಜೆ ಭೇಟಿ ನೀಡಿ ಪತಿ ದರ್ಶನ್ ಅವರ ಆರೋಗ್ಯ ವಿಚಾರಿಸಿದರು. ಈ ವೇಳೆ ಮುಂದಿನ ಕಾನೂನು ಹೋರಾಟದ ಬಗ್ಗೆ ದರ್ಶನ್ ಅವರೊಂದಿಗೆ ಚರ್ಚಿಸಿದರು ಎಂಬ ಮಾಹಿತಿ ಲಭ್ಯವಾಗಿದೆ.

ತಿರುಚ್ಚಿ ಶಿವ ಇಂಡಿ ವಿಪಿ ಅಭ್ಯರ್ಥಿ?

ದೆಹಲಿ: ಉಪರಾಷ್ಟ್ರಪತಿ ಚುನಾವಣೆಗೆ ಇಂಡಿಯಾ ಮೈತ್ರಿಕೂಟ ತನ್ನ ಅಭ್ಯರ್ಥಿಯನ್ನಾಗಿ, ತಮಿಳುನಾಡಿನ ಡಿಎಂಕೆ ರಾಜ್ಯಸಭಾ ಸಂಸದ ತಿರುಚಿ ಶಿವ ಅವರನ್ನು ಆಯ್ಕೆ ಮಾಡುವ ಸಾಧ್ಯತೆ ಇದೆ. ಪ್ರಾದೇಶಿಕ ರಾಜಕೀಯದಿಂದ ಎದುರಾಗುವ ಪ್ರಮುಖ ಅಡಚಣೆಯನ್ನು ನಿವಾರಿಸುವ ಕಾರ್ಯತಂತ್ರದ ನಡೆಯಾಗಿ, ಇಂಡಿಯಾ ಮೈತ್ರಿಕೂಟ, ಡಿಎಂಕೆ ಪಕ್ಷದಿಂದ ರಾಜ್ಯಸಭಾ ಸಂಸದರಾಗಿರುವ ತಿರುಚಿ ಶಿವ ಅವರನ್ನು ಉಪರಾಷ್ಟ್ರಪತಿ ಅಭ್ಯರ್ಥಿಯಾಗಿ ಆಯ್ಕೆ ಮಾಡುವ ಸಾಧ್ಯತೆಯಿದೆ. ಅಲ್ಲದೇ ಕೇವಲ ತಮಿಳುನಾಡು ಮಾತ್ರವಲ್ಲದೇ, ಸಮಸ್ತ ದಕ್ಷಿಣದ ರಾಜ್ಯಗಳ ಬೆಂಬಲವನ್ನೂ ಗಳಿಸಬಹುದು ಎಂಬುದು ಇಂಡಿಯಾ ಬ್ಲಾಕ್ ಲೆಕ್ಕಾಚಾರವಾಗಿದೆ.

ನಿರುದ್ಯೋಗದ ಪ್ರಮಾಣ ಇಳಿಕೆ



ದೆಹಲಿ: ದೇಶದಲ್ಲಿ ನಿರುದ್ಯೋಗ ದರವು ಜುಲೈನಲ್ಲಿ ಶೇ.5.2ಕ್ಕೆ ಇಳಿದಿದೆ ಎಂದು ಕೇಂದ್ರ ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವಾಲಯ ಸೋಮವಾರ ತಿಳಿಸಿದೆ. ಜೂನ್ ತಿಂಗಳಿನಲ್ಲಿ ಇದು ಶೇ.5.6ರಷ್ಟಿತ್ತು. ಪುರುಷರಲ್ಲಿ ನಿರುದ್ಯೋಗ ಪ್ರಮಾಣವು ಶೇ.5.3ರಷ್ಟಿದ್ದರೆ, ಮಹಿಳೆಯರಲ್ಲಿ ಇದು ಶೇ.5.1ರಷ್ಟು ಇದೆ. ಈ ಪೈಕಿ 15ರಿಂದ 29 ವರ್ಷದೊಳಗಿನವರ ನಿರುದ್ಯೋಗ ಪ್ರಮಾಣವು ಶೇ.15.3ರಿಂದ ಶೇ.14.9ಕ್ಕೆ ತಗ್ಗಿದೆ. ಇದು ನಗರ ಪ್ರದೇಶದಲ್ಲಿ ಶೇ.19ರಷ್ಟಿದ್ದರೆ, ಗ್ರಾಮೀಣ ಭಾಗದಲ್ಲಿ ಶೇ.13ರಷ್ಟಿದೆ. ನಗರ ಪ್ರದೇಶದಲ್ಲಿರುವ ಎಲ್ಲ ವಯೋಮಾನದವರ ನಿರುದ್ಯೋಗ ಪ್ರಮಾಣ ಜೂನ್‌ನಲ್ಲಿ ಶೇ.7.1 ಇತ್ತು. ಇದು ಜುಲೈನಲ್ಲಿ ಶೇ.7.2ಕ್ಕೆ ಏರಿಕೆಯಾಗಿದೆ ಎಂದು ತಿಳಿಸಿದೆ.

ಫನ್‌ತರಂಗ

- ರಘುಪತಿ ಶೃಂಗೇರಿ -

ದೇಶದಲ್ಲೇ ನಾನೇ ನಂ.1.. 'ಗೊತ್ತಿಲ್ಲ ಸಚಿವ' ಎಂಬ ಟ್ರೋಲ್‌ಗೆ ಗೃಹ ಮಂತ್ರಿ ತಿರುಗೇಟು
ಸುದ್ದಿ

ಏನ್ ಕೇಳಿದ್ರೂ ಗೊತ್ತಿಲ್ಲ ಅಂತಾನೆ, ನಮ್ ಮಗೂ ಮುಂದೆ ನಂ.1 ರಾಜಕಾರಣಿ ಆಗೋ ಲಕ್ಷಣ ಇದೆ ಕಣ್ರೀ!!



ಕೋಡಿಬಿದ್ದ ಕೆರೆಗಳು, ಅಣೆಕಟ್ಟೆಗಳು ಭರ್ತಿ, ರಸ್ತೆ ಸಂಪರ್ಕ ಕಡಿತ, ಜನಜೀವನ ಅಸ್ತವ್ಯಸ್ತ

ಉತ್ತರ-ದಕ್ಷಿಣದಲ್ಲಿ ವರುಣನ ಆರ್ಭಟ

ಬೆಂಗಳೂರು: ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಸೋಮವಾರ ವರುಣನ ಆರ್ಭಟ ಮುಂದುವರಿದಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ತಗ್ಗುಪ್ರದೇಶಗಳು, ಜಮೀನುಗಳು ಜಲಾವೃತಗೊಂಡಿವೆ. ಹಲವೆಡೆ ಮನೆಗಳಿಗೆ ಹಾನಿಯಾಗಿದೆ. ಜಲಾಶಯಗಳಿಗೆ ಒಳಹರಿವು ಹೆಚ್ಚಿದೆ. ಮುಂಜಾಗ್ರತೆಯಾಗಿ ಜಲಾಶಯಗಳಿಂದ ಹೊರಹರಿವಿನ ಪ್ರಮಾಣ ಹೆಚ್ಚಿಸಿದ್ದು, ನದಿಪಾತ್ರದ ಪ್ರದೇಶಗಳಲ್ಲಿ ಆತಂಕದ ಸ್ಥಿತಿ ಮೂಡಿದೆ. ಬೆಳಗಾವಿ, ಉತ್ತರ ಕನ್ನಡ, ಧಾರವಾಡ, ಕೊಡಗು, ದಾವಣಗೆರೆ, ಚಿತ್ರದುರ್ಗ ಜಿಲ್ಲೆಯಾದ್ಯಂತ ಹಾಗೂ ಬೀದರ್ ಜಿಲ್ಲೆಯ ಔರಾದ್ ತಾಲೂಕಿನಲ್ಲಿ ಶಾಲೆ, ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ಕೊಡಗು, ಉಡುಪಿ, ಚಿಕ್ಕಮಗಳೂರು ಜಿಲ್ಲೆಯ ನಾಲ್ಕು ತಾಲೂಕು, ಬೆಳಗಾವಿ ಜಿಲ್ಲೆಯ 8 ತಾಲೂಕುಗಳ ವ್ಯಾಪ್ತಿಯಲ್ಲಿ ಜಿಲ್ಲಾಡಳಿತ ಮಂಗಳವಾರವೂ ರಜೆ ಘೋಷಿಸಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ರಾಜಾ ಲಖಮಗೌಡ ಜಲಾಶಯ (ಹಿಡಕಲ್) ಭರ್ತಿಯಾಗಿದ್ದು, → 4

ಎಲ್ಲೆಲ್ಲಿ ಏನೇನು ಅನಾಹುತ?

- ಬೀದರ್ ಜಿಲ್ಲೆಯ ನಂದಿ ಬಿಜಲಗಾಂವ್ ಗ್ರಾಮದಲ್ಲಿ 40ಕ್ಕೂ ಹೆಚ್ಚು ಎಮ್ಮೆಗಳು ನೀರುಪಾಲು
- ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ದೇಗುಲದ ಕಪ್ಪೆಶಂಕರನಾರಾಯಣ ದೇಗುಲ ಮುಳುಗಡೆ
- ಸುರಿಯುತ್ತಿರುವ ಭಾರೀ ಮಳೆಗೆ ಕೊಪ್ಪಳದ ಐತಿಹಾಸಿಕ ಸ್ಮಾರಕಗಳು ಸಂಪೂರ್ಣವಾಗಿ ಜಲಾವೃತ

ಬೆಳಗಾವಿ ಜಿಲ್ಲೆಯ ಸವದತ್ತಿ ಬಳಿಯ ನವಿಲುತೀರ್ಥ ಅಣೆಕಟ್ಟೆನಿಂದ ಸೋಮವಾರ 10 ಸಾವಿರ ಕ್ಯೂಸೆಕ್ ನೀರು ಹರಿಸಲಾಯಿತು.

ಸಿಇಸಿ ವಿರುದ ಮಹಾಭಿಯೋಗ?

ದೆಹಲಿ: ಮತಗಳ್ಳತನ ಆರೋಪದ ಮೇಲೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಸಂಸತ್ತಿನಲ್ಲಿ ಮಹಾಭಿಯೋಗ ಪ್ರಸ್ತಾವನೆ ಮಂಡಿಸಲು ರಾಜ್ಯಸಭೆಯ ಪ್ರತಿ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ ನಡೆದ ಇಂಡಿಯಾ ಕೂಟದ ಸಭೆಯಲ್ಲಿ ನಿರ್ಧರಿಸಲಾಗಿದೆ.



ಈ ಕುರಿತು ಪ್ರತಿಕ್ರಿಯಿಸಿದ ಪ್ರತಿಪಕ್ಷದ ನಾಯಕರೊಬ್ಬರು, ಇಂಡಿಯಾ ಕೂಟದ ಎಲ್ಲ ಸದಸ್ಯರು ಈ ಪ್ರಸ್ತಾಪವನೆಗೆ ಒಪ್ಪಿಗೆ ನೀಡಿದ್ದಾರೆ. ಕಾನೂನು ವಿಧಾನಗಳ ಕುರಿತು ಶೀಘ್ರ ಚರ್ಚೆ ನಡೆಯಲಿದೆ. ಈ ಪ್ರಕ್ರಿಯೆ ನ್ಯಾಯಾಧೀಶರ ಮಹಾಭಿಯೋಗದಂತೆಯೇ ಇರಲಿದೆ ಎಂದು ಹೇಳಿದ್ದಾರೆ.

ಸಮಾಚಾರ ಸಣ್ಣದಲ್ಲ

ಪುರಾತನ ಸನಾತನ ಭವ್ಯ ಭಾರತ ಹೆಸರಿನಲ್ಲಿ ಆ.22 23ಕ್ಕೆ ವಾಗ್ದೇವಿ ಕಲಾ ಉತ್ಸವ

ಬೆಂಗಳೂರು: ಮಾರತಹಳ್ಳಿಯ ಮುನ್ನೇಕೊಳಾಲಿನ ವಾಗ್ದೇವಿ ವಿಲಾಸ ಶಿಕ್ಷಣ ಸಂಸ್ಥೆಯು ಆ.22 ಮತ್ತು 23ರಂದು ವಾಗ್ದೇವಿ ಕಲಾ ಉತ್ಸವವನ್ನು ಆಯೋಜಿಸಿದೆ ಎಂದು ಪ್ರಕಟಣೆ ತಿಳಿಸಿದೆ. ಪುರಾತನ ಸನಾತನ ಭವ್ಯ ಭಾರತ ಎಂಬ ಶೀರ್ಷಿಕೆಯಲ್ಲಿ ನಡೆಯಲಿರುವ ಕಾರ್ಯಕ್ರಮ



ವನ್ನು ಇಸ್ರೋದ ಮಾಜಿ ಅಧ್ಯಕ್ಷ ಡಾ.ಎ.ಎಸ್ ಕಿರಣ್ ಕುಮಾರ್ ಉದ್ಘಾಟಿಸಲಿದ್ದಾರೆ. ಆ. 23 ರಂದು ಬೆಳಗ್ಗೆ 11 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಶಿಕ್ಷಣ ಮತ್ತು ಸಂಸ್ಕೃತ ತಜ್ಞ ಮತ್ತು ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಜಗದ್ಗುರು ರಮಾನಂದಾ ಚಾರ್ಯರಿಗೆ ಸನ್ಮಾನ ಸಮಾರಂಭ ನಡೆಯಲಿದೆ. ಶತಾವಧಾನಿ ಆರ್. ಗಣೇಶ್ ಮತ್ತು ವಾಗ್ದೇವಿ ವಿಲಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಕೆ. ಹರೀಶ್ ಉಪಸ್ಥಿತರಿರ ಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಭಾರತೀಯ ಕಲೆ, ಇತಿಹಾಸ ಮತ್ತು ಪರಂಪರೆಯ ಮೇಲೆ 50 ಕ್ಕೂ ಹೆಚ್ಚು ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶದ 100 ಕ್ಕೂ ಹೆಚ್ಚು ಶಾಲೆಗಳ ವಿದ್ಯಾರ್ಥಿಗಳು ಕಲಾ ಉತ್ಸವದಲ್ಲಿ ಭಾಗವಹಿ ಸಲಿದ್ದಾರೆ. ಈ ಬಾರಿ ವಿದ್ಯಾರ್ಥಿಗಳಿಗೆ ಪುರಾತನ ಭವ್ಯ ಭಾರತದ ಇತಿಹಾಸ ಮತ್ತು ಪರಂಪರೆ ಕುರಿತು ಸ್ಪರ್ಧೆಗಳನ್ನು ಆಯೋಜಿಸ ಲಾಗಿದೆ. ಪ್ರಬಂಧ, ಸಮೂಹ ಗಾಯನ, ಚಿತ್ರಕಲೆ, ನೃತ್ಯ, ಸಂಗೀತ, ನಾಟಕ, ಉಡುಗೆ-ತೊಡುಗೆ ಮುಂತಾದ ಕಲಾ ಪ್ರಕಾರಗಳ ಮೇಲೆ ವಿದ್ಯಾರ್ಥಿಗಳು ಸ್ಪರ್ಧೆಗಳಲ್ಲಿ ಭಾಗವಹಿಸಲಿ ದ್ದಾರೆ. ಸ್ಪರ್ಧೆಗಳು ಮತ್ತು ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ: 8050005851

ವಿರಾಮ
ಪ್ರತಿ ಭಾನುವಾರ

ಹೆಚ್ಚುತ್ತಿರುವ ಹೃದಯಾಘಾತ ಪ್ರಕರಣದ ಬಗ್ಗೆ ಸದನದಲ್ಲಿ ಚರ್ಚೆ । ಬಾಗಲಕೋಟೆ, ಯಾದಗಿರಿ, ರಾಯಚೂರಿನಲ್ಲಿ ಶೀಘ್ರದಲ್ಲಿ ಜಯದೇವ ಹೃದ್ರೋಗ ಸಂಸ್ಥೆಯಿಂದ ಕಾರ್ಯಾರಂಭ: ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್

ಎಲ್ಲ ಜಿಲ್ಲೆಗೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಗುರಿ

ವಿಶ್ವವಾಣಿ ಸುದ್ದಿಮನೆ ವಿಧಾನಪರಿಷತ್

ರಾಜ್ಯದಲ್ಲಿ ಹೆಚ್ಚುತ್ತಿರುವ ಹೃದಯಾಘಾತಗಳಿಗೆ ಜನತೆ ಅನಗತ್ಯವಾಗಿ ಗೊಂದಲಕ್ಕೆ ಒಳಗಾಗಬಾರದು. ವ್ಯಾಯಾಮ, ಪ್ರಾಣಾಯಾಮ, ಆಹಾರಪದ್ಧತಿ ಹಾಗೂ ಜೀವನ ಶೈಲಿಯನ್ನು ಬದಲಾವಣೆ ಮಾಡಿದರೆ ಯಾವುದೇ ಸಮಸ್ಯೆ ಬರುವುದಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಜನತೆಗೆ ಧೈರ್ಯ ತುಂಬಿದ್ದಾರೆ.

ಕಾಂಗ್ರೆಸ್ ಸದಸ್ಯ ದಿನೇಶ್ ಗೂಳಿಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಇತ್ತೀಚೆಗೆ ಹೃದಯಾಘಾತ, ಪ್ರಕರಣಗಳ ಸಂಖ್ಯೆ ಹೆಚ್ಚಳದ ಆತಂಕ ಎಲ್ಲರಲ್ಲೂ ಮನೆ ಮಾಡಿದೆ. ಜಯದೇವ ಆಸ್ಪತ್ರೆಯಲ್ಲಿ ಜನರು ಪ್ರತಿನಿತ್ಯ ಬಂದು ಹೃದಯ ತಪಾಸಣೆ ಮಾಡಿಸಿಕೊಳ್ಳುತ್ತಿದ್ದಾರೆ. ಇದರ ಪ್ರಮಾಣ ಶೇ.25ರಷ್ಟು ಏರಿಕೆಯಾಗಿದೆ ಎಂದು ಮಾಹಿತಿ ನೀಡಿದರು.

ಕೋವಿಡ್ ನಂತರ ಹೃದಯಘಾತ ಪ್ರಕರಣಗಳು ಹೆಚ್ಚಾಗುತ್ತಿವೆ ಎಂಬ ಗುಮಾನಿಯೂ ಇದೆ. ವಾಸ್ತವವಾಗಿ ಇದಕ್ಕೂ ಅದಕ್ಕೂ ಸಂಬಂಧವೇ ಇಲ್ಲ. ಪ್ರತಿದಿನ ವ್ಯಾಯಾಮ, ಪ್ರಾಣಾಯಾಮ, ಸರಿಯಾದ ಸಮಯಕ್ಕೆ ನಿದ್ದೆ, ಒತ್ತಡ ಇಲ್ಲದಿರುವುದು, ಖಿನ್ನತೆ ಒಳಗಾಗದೆ ಸಮತೋಲನ ಕಾಯ್ದುಕೊಂಡರೆ ಯಾವುದೇ ಆರೋಗ್ಯ ಸಮಸ್ಯೆಗಳು ಬರುವುದಿಲ್ಲ. ಈ ಪ್ರಕರಣಗಳ ಕುರಿತಂತೆ ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕರಾದ ಡಾ.ರವೀಂದ್ರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕಾರ್ಯಪಡೆ ರಚಿಸಿತ್ತು. ಸರಕಾರಕ್ಕೆ ನೀಡಿರುವ ವರದಿಯಲ್ಲಿ ಜನರ ಊಹೆಗೂ ಇದಕ್ಕೂ ಸಂಬಂಧವಿಲ್ಲ ಎಂದು ಹೇಳಿದ್ದಾರೆ. ಜನರು ಮೊದಲು ವದಂತಿಗಳಿಗೆ ಕಿವಿಗೊಡುವುದನ್ನು ನಿಲ್ಲಿಸಬೇಕು ಎಂದು ಮನವಿ ಮಾಡಿದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ: ರಾಜ್ಯದ ಎಲ್ಲಾ ಸರಕಾರಿ ಆಸ್ಪತ್ರೆಗಳ ಜೊತೆ ಕಡ್ಡಾಯವಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯಬೇಕೆಂಬುದು ನಮ್ಮ ಸರಕಾರದ ಸಿದ್ಧಾಂತವಾಗಿದೆ. ಈಗಾಗಲೇ ಅನೇಕ ಜಿಲ್ಲೆಗಳಲ್ಲಿ ಈ ಆಸ್ಪತ್ರೆಗಳು ಕಾರ್ಯಾರಂಭ ಮಾಡಿವೆ. ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಸ್ಥಾಪನೆ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೂಚನೆ ಕೊಟ್ಟಿದ್ದಾರೆ. ಈ ನಿಯಮವನ್ನು ನಾವು ಈಗಾಗಲೇ ಅಳವಡಿಸಿಕೊಂಡು ಕಾರ್ಯಾರಂಭ ಮಾಡಿದ್ದೇವೆ. ಎಲ್ಲಾ ಜಿಲ್ಲೆಗಳಲ್ಲೂ ಸೂಪರ್ ಸ್ಪೆಷಾಲಿಟಿ ಜೊತೆಗೆ ಟ್ರಾಮಾ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಎಂದರು.

ಬೆಂಗಳೂರು-ಮೈಸೂರು, ಕಲಬುರಗಿ,ಹುಬ್ಬಳ್ಳಿಯ ಜಯದೇವ ಹೃದ್ರೋಗ ಸಂಸ್ಥೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭವಾಗಿದೆ. ಇದೇ ರೀತಿ ಬಾಗಲಕೋಟೆ, ಯಾದಗಿರಿ, ರಾಯಚೂರಿನಲ್ಲೂ ಶೀಘ್ರದಲ್ಲೇ ಕಾರ್ಯಾರಂಭ ಮಾಡಲಾಗುವುದು. ಬೀದರ್, ಕೊಪ್ಪಳ, ಬೆಳಗಾವಿಯಲ್ಲಿ ಎರಡರಿಂದ ಮೂರು ತಿಂಗಳೊಳಗೆ ಈ ಆಸ್ಪತ್ರೆಗಳು ಲೋಕಾರ್ಪಣೆಗೊಳ್ಳಲಿವೆ ಎಂದು ತಿಳಿಸಿದರು.

ರಾಜ್ಯದಲ್ಲಿ ಹೃದ್ರೋಗ ಸಮಸ್ಯೆಗಳು ಹೆಚ್ಚಾಗುತ್ತಿರುವುದರೊಂದಿಗೆ ಹೃದಯ ರೋಗ, ಮದ್ಯಪಾನ, ಧೂಮಪಾನ ಮಾಡದಂತಹ ಯುವಕರು ಹಾಗೂ ಯಾವುದೇ ಮಾದಕವಸ್ತು ವ್ಯಸನಿಗಳಲ್ಲದವರಲ್ಲೂ ಸಹ ಹೃದಯಘಾತ ಸಂಖ್ಯೆ ಹೆಚ್ಚಾಗುತ್ತಿದೆ. ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಜನವರಿಯಿಂದ 1 ಲಕ್ಷಕ್ಕೂ ಅಧಿಕ ಮಂದಿ ಹೃದ್ರೋಗ ತಪಾಸಣೆಗೆ ಬಂದಿದ್ದಾರೆ. ಇಲ್ಲಿ ಸಿಬ್ಬಂದಿ ಕೊರತೆಯಿದೆ. ಬೆಂಗಳೂರಿನ ಜಯದೇವದಲ್ಲಿ 60-70 ಪಿಜಿ ವಿದ್ಯಾರ್ಥಿಗಳು ಕೆಲಸ ಮಾಡುತ್ತಿದ್ದು ಅವರಲ್ಲಿ10-15 ಪಿಜಿ ವಿದ್ಯಾರ್ಥಿಗಳನ್ನು ಮೈಸೂರಿನ ಜಯದೇವಗೆ ವರ್ಗಾವಣೆ ಮಾಡಿಕೊಡಬೇಕು.

-**ದಿನೇಶ್ ಗೂಳಿಗೌಡ,** ವಿಧಾನಪರಿಷತ್ ಸದಸ್ಯ

ಹಾಸನ ಜಿಲ್ಲೆಯಲ್ಲಿ ಹೆಚ್ಚಳ ತಪ್ಪು ಗ್ರಹಿಕೆ

ವಿಶೇಷವಾಗಿ ಹಾಸನ ಜಿಲ್ಲೆಯಲ್ಲಿ ಹೃದಯಘಾತಗಳ ಸಂಖ್ಯೆ ಹೆಚ್ಚಳವಾಗಿದೆ ಎಂಬ ಆತಂಕ ಜನರಲ್ಲಿ ಮೂಡಿದೆ. ಇದು ತಪ್ಪು ಗ್ರಹಿಕೆ. ವಾಸ್ತವವಾಗಿ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಸರಾಸರಿ ಪ್ರಮಾಣದಲ್ಲಿ ಯಾವುದೇ ವ್ಯತ್ಯಾಸವಾಗಿಲ್ಲ. ಶೇ.5ರಿಂದ 6ರಷ್ಟು ಪ್ರಕರಣಗಳು ಹೃದಯಾಘಾತಕ್ಕೆ ಸಂಬಂಧಿಸಿದವು. ಈ ವರ್ಷವು ಇಷ್ಟೇ ಪ್ರಮಾಣದಲ್ಲಿ ಇದೆ. ಬದಲಾದ ಜೀವನಶೈಲಿ, ಅಧಿಕ ಒತ್ತಡ, ಬೊಜ್ಜು, ಮದ್ಯಪಾನ, ಧೂಮಪಾನ, ಡ್ರಗ್ಸ್ ಸೇವನೆ, ಕುಟುಂಬದ ಹಿನ್ನಲೆ ಇತ್ಯಾದಿ ಕಾರಣಗಳಿಂದ ಹೃದಯಘಾತಗಳು ಸಂಭವಿಸಿವೆ. ಯಾವುದೋ ಒಂದು ಪ್ರಕರಣ ಆಧಾರವಾಗಿಟ್ಟುಕೊಂಡು ಜನತೆ ಆತಂಕಕ್ಕೆ ಒಳಗಾಗಬಾರದು ಎಂದು ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಸಲಹೆ ನೀಡಿದರು.

ಹೂಡಿ ಕೆರೆ ಒತ್ತುವರಿ ತೆರವು ಕಾರ್ಯ

ಬೆಂಗಳೂರು: ಮಹದೇವಪುರ ವಲಯ ಹೂಡಿ ಗ್ರಾಮದ ಹೂಡಿ ಕೆರೆಯು ಒಟ್ಟು 15 ಎಕರೆ 10 ಗುಂಟೆ ಪ್ರದೇಶವಿದ್ದು, ಈ ಪೈಕಿ 14.5 ಗುಂಟೆ ಖಾಸಗಿ ಒತ್ತುವರಿಯಾಗಿರುತ್ತದೆ. ಈ ಕೆರೆಯ ಒತ್ತುವರಿಗಳನ್ನು ಕಂದಾಯ ಇಲಾಖೆ ವತಿಯಿಂದ ಗುರುತಿಸಿ ಸರ್ವೆ ನಕ್ಷೆಯನ್ನು ನೀಡಿರುತ್ತಾರೆ. ಸದರಿ ಒತ್ತುವರಿದಾರರಿಗೆ ನೋಟಿಸ್ ಹಾಗೂ ಒತ್ತುವರಿ ತೆರವು ಆದೇಶವನ್ನು ನೀಡಲಾಗಿರುತ್ತದೆ. ಮಹದೇವಪುರ ವಲಯ ಆಯುಕ್ತ ಕೆ.ಎನ್ ರಮೇಶ್‌ರ ನಿರ್ದೇಶನದಂತೆ ಸೋಮವಾರ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಂದಾಯ ಇಲಾಖೆಯ ಸರ್ವೆಯರ್ ಸಮಕ್ಷಮದಲ್ಲಿ ಸುಮಾರು 1.75 ಗುಂಟೆ ಪ್ರದೇಶವನ್ನು ತೆರವುಗೊಳಿಸಲಾಗಿದೆ. ಒತ್ತುವರಿ ಸ್ಥಳದಲ್ಲಿ ಶೆಡ್, ಖಾಲಿ ಪ್ರದೇಶ ಮತ್ತು ಕಾಂಪೌಂಡ್ ಗೋಡೆ ಇದ್ದು, ಆ ಒತ್ತುವರಿಯನ್ನು ಜೆಸಿಬಿ ಮೂಲಕ ತೆರವುಗೊಳಿಸಿ ಸರಕಾರದ ವಶಕ್ಕೆ ಪಡೆಯಲಾಗಿರುತ್ತದೆ.

ನಿವೃತ್ತಿ ಭತ್ಯೆ, ಪಿಂಚಣಿ ಸೇರಿ ಹಲವು ಸೌಲಭ್ಯ ನಿರಾಕರಿಸಿದ ಅರ್ಜಿ ಸಂಬಂಧ ನೋಟಿಸ್

ಸಂಸ್ಕೃತ ವಿಶ್ವವಿದ್ಯಾಲಯ, ಸರಕಾರಕ್ಕೆ ಹೈ ನೋಟಿಸ್

ಬೆಂಗಳೂರು: ನಿವೃತ್ತಿ ಬಳಿಕ ಪಿಂಚಣಿ ಹಾಗೂ ಇತರ ನಿವೃತ್ತಿ ಭತ್ಯೆಗಳನ್ನು ನಿರಾಕರಿಸಿದ್ದ ಕ್ರಮ ಪ್ರಶ್ನಿಸಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಕೆಲ ನಿವೃತ್ತ ನೌಕರರು ಸಲ್ಲಿಸಿರುವ ಅರ್ಜಿ ಸಂಬಂಧ ರಾಜ್ಯ ಸರಕಾರ ಹಾಗೂ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ 20 ವರ್ಷಕ್ಕೂ ಅಧಿಕ ಅವಧಿಯವರೆಗೆ ಸೇವೆ ಸಲ್ಲಿಸಿರುವ ಎಸ್.ನಾರಾಯಣ ಸೇರಿ ಐವರು ನಿವೃತ್ತ ನೌಕರರು ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಎಚ್.ಟಿ.ನರೇಂದ್ರ ಪ್ರಸಾದ್ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ಕೆಲ ಕಾಲ ಅರ್ಜಿ ಆಲಿಸಿದ ಪೀಠವು ಪ್ರತಿವಾದಿಗಳಾದ ರಾಜ್ಯ ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಹಾಗೂ ರಾಜ್ಯ ಆರ್ಥಿಕ ಇಲಾಖೆಗೆ ನೋಟಿಸ್ ಜಾರಿಗೊಳಿಸಿ, ವಿಚಾರಣೆ ಮುಂದೂಡಿದೆ.

ಮೇಲುಕೋಟೆಯ ಸಂಸ್ಕೃತ ಸಂಶೋಧನಾ ಅಕಾಡೆಮಿಯಲ್ಲಿ 1979ರಿಂದ 1992ರ ಅವಧಿಯಲ್ಲಿ ಗುತ್ತಿಗೆ ಆಧಾರದಲ್ಲಿ ನೇಮಕೊಂಡಿದ್ದ ಅರ್ಜಿದಾರರೆಲ್ಲರೂ 2013ರಿಂದ 2017ರ ಅವಧಿಯಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದ್ದಾರೆ. ಎರಡು ದಶಕಗಳಿಗೂ ಅಧಿಕ ಅವಧಿಯವರೆಗೆ ಸೇವೆ ಸಲ್ಲಿಸಿದ ಹೊರತಾಗಿಯೂ ಅರ್ಜಿದಾರರಿಗೆ ಪಿಂಚಣಿ ಇನ್ನಿತರ ನಿವೃತ್ತಿ ಭತ್ಯೆಗಳನ್ನು ನಿರಾಕರಿಸಲಾಗಿದೆ. ಗುತ್ತಿಗೆ ಆಧಾರದಲ್ಲಿ ನೇಮಕೊಂಡಿದ್ದರೂ 2007ರ ಏಪ್ರಿಲ್ 1ರಿಂದ

ಸರಕಾರ ಸಾಮಾನ್ಯ ವೇತನ ಶ್ರೇಣಿಯನ್ನು ಅರ್ಜಿದಾರರಿಗೂ ವಿಸ್ತರಿಸಿದೆ ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

ಮೇಲುಕೋಟೆಯ ಸಂಸ್ಕೃತ ಸಂಶೋಧನಾ ಅಕಾಡೆಮಿಗೆ 2015ರ ಮಾರ್ಚ್ 25ರಿಂದ 6ನೇ ವೇತನ ಆಯೋಗದ ಲಾಭಗಳನ್ನು ವಿಸ್ತರಿಸಲಾಗಿದೆ. ಆದರೆ, ಅರ್ಜಿದಾರರಿಗೆ ಸಂಬಂಧಿಸಿದಂತೆ ಸರಕಾರ ಯಾವುದೇ ಕ್ರಮ ಕೈಗೊಂಡಿಲ್ಲ. ಈ ಸಂಬಂಧ ಅರ್ಜಿದಾರರ ಮನವಿ ಪರಿಗಣಿಸಿ, ಸೂಕ್ತ ತೀರ್ಮಾನ ಕೈಗೊಳ್ಳುವಂತೆ ಮಾನವ ಹಕ್ಕುಗಳ ಆಯೋಗ ಹಾಗೂ ಹೈಕೋರ್ಟ್ ಸಹ ಆದೇಶ ನೀಡಿವೆಯಾದರೂ, ಅರ್ಜಿದಾರರ ಮನವಿಗಳನ್ನು ಸರಕಾರ ತಿರಸ್ಕರಿಸಿದೆ. ಆದ್ದರಿಂದ, ಅರ್ಜಿದಾರರು ನಿವೃತ್ತಿ ಹೊಂದಿದ ದಿನಾಂಕದಿಂದ ಅನ್ವಯವಾಗುವಂತೆ ಪಿಂಚಣಿ ಹಾಗೂ ಇತರ ನಿವೃತ್ತಿ ಭತ್ಯೆಗಳನ್ನು ಪಾವತಿಸುವಂತೆ ನಿರ್ದೇಶಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.

ಒಪಿಎಸ್ ಅರ್ಹರಿದ್ದರೂ ಪಿಂಚಣಿ ನಿರಾಕರಣೆ

ಅರ್ಜಿದಾರರಿಗೆ ಅವರ ಸೇವಾ ಅಧಿಯಲ್ಲಿ ವೇತನವನ್ನಷ್ಟೇ ಪಾವತಿಸಲಾಗಿದೆ. ಅರ್ಜಿದಾರರು 2006ರ ಏಪ್ರಿಲ್ 1 ಕ್ಕೂ ಮೊದಲೇ ನೇಮಕಗೊಂಡಿದ್ದು, ಈ ದಿನಾಂಕಕ್ಕೂ ಮುಂಚಿತವಾಗಿ ಸರಕಾರಿ ಅನುದಾನಿತ ಸಂಸ್ಥೆಗಳಿಗೆ ನೇಮಕಗೊಳ್ಳುವ ನೌಕರರು ಹಳೇ ಪಿಂಚಣಿ ಯೋಜನೆ (ಒಪಿಎಸ್) ಅಡಿಯಲ್ಲಿ ಪಿಂಚಣಿ ಹಾಗೂ ನಿವೃತ್ತಿ ಭತ್ಯೆಗಳನ್ನು ಪಡೆಯಲು ಅರ್ಹರಾಗಿರುತ್ತಾರೆ. ಮೇಲುಕೋಟೆ ಸಂಸ್ಕೃತ ಅಕಾಡೆಮಿಯಲ್ಲಿ ಸೇವೆ ಸಲ್ಲಿಸಿದವರಿಗೆ ನಿವೃತ್ತಿ ಭತ್ಯೆ ಪಾವತಿ ಬಗ್ಗೆ ಸಂಸ್ಕೃತ ವಿಶ್ವವಿದ್ಯಾಲಯ ಸಹ ಶಿಫಾರಸು ಮಾಡಿದೆ. ಹೀಗಿದ್ದರೂ, ಅರ್ಜಿದಾರರಿಗೆ ಸೌಲಭ್ಯ ನಿರಾಕರಿಸಲಾಗಿದೆ ಎಂದು ಅರ್ಜಿಯಲ್ಲಿ ಆಕ್ಷೇಪಿಸಲಾಗಿದೆ.

PRESIDENT

ಸ್ನೇಯ್ಡರ್ ಎಲೆಕ್ಟ್ರಿಕ್ ಪ್ರೆಸಿಡೆಂಟ್ ಸಿಸ್ಟಮ್ಸ್ ಲಿಮಿಟೆಡ್

CIN: U32109KA1984PLC079103

ನೋಂ.ಕಚೇರಿ: 5ಸಿ/1, ಕೆಐಎಡಿಬಿ ಕೈಗಾರಿಕಾ ಪ್ರದೇಶ, ಅತ್ತಿಬೆಲೆ, ಬೆಂಗಳೂರು ಗ್ರಾಮಾಂತರ, ಬೆಂಗಳೂರು-562107, ಕರ್ನಾಟಕ, ಭಾರತ;

ದೂರವಾಣಿ: 080 67888300

ವೆಬ್‌ಸೈಟ್: www.schneiderelectricpresident.com; **ಇ-ಮೇಲ್:** companysecretary@se.com

ಸದಸ್ಯರಿಗೆ ಸೂಚನೆ – ನಲವತ್ತೊಂದನೇ (41ನೇ) ವಾರ್ಷಿಕ ಮಹಾಸಭೆ

ಸದಸ್ಯರು ಗಮನಿಸಬೇಕಾದುದೇನೆಂದರೆ, ಸ್ನೇಯ್ಡರ್ ಎಲೆಕ್ಟ್ರಿಕ್ ಪ್ರೆಸಿಡೆಂಟ್ ಸಿಸ್ಟಮ್ಸ್ ಲಿಮಿಟೆಡ್ (**"ದಿ ಕಂಪನಿ"**) ಯ ನಲವತ್ತೊಂದನೇ (41ನೇ) ವಾರ್ಷಿಕ ಮಹಾ ಸಭೆಯು (ಎಜಿಎಂ) ದಿನಾಂಕ **ಸೆಪ್ಟಂಬರ್ 17, 2025 ಬುಧವಾರದಂದು** ಮಧ್ಯಾಹ್ನ 3.30ಕ್ಕೆ (ಭಾ.ಕಾ.) ವಿಡಿಯೋ ಕಾನ್ಫರೆನ್ಸಿಂಗ್ ("ವಿಸಿ")/ ಇತರೆ ('ವಿಸಿ')/ಇತರೆ ಆಡಿಯೊ ವಿಷುಯಲ್ ಮೀನ್ಸ್ ('ಒಎವಿಎಂ') ಮೂಲಕ ಸಾಮಾನ್ಯ ಸ್ಥಳದಲ್ಲಿ ಸದಸ್ಯರ ಭೌತಿಕ ಉಪಸ್ಥಿತಿ ಇಲ್ಲದೆ ಕಂಪನಿಗಳು ಎಜಿಎಂನ್ನು ವಿಸಿ / ಒಎವಿಎಂ ಮೂಲಕ ನಡೆಸಲು ಅವಕಾಶವಿದೆ ಕಂಪನಿ ಕಾಯಿದೆ 2013 ("ಕಾಯಿದೆ") ಮತ್ತು ಇತರೆ ಅನ್ವಯವಾಗುವ ಅನ್ವಯವಾಗುವ ಎಲ್ಲಾ ನಿಯಂತ್ರಣಗಳು, ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯ (**ಲಿಸ್ಟಿಂಗ್ ಅಬ್ಲಿಗೇಷನ್ಸ್ ಮತ್ತು ಡಿಸ್‌ಕ್ಲೋಸರ್ ರಿಕ್ವಯರ್‌ಮೆಂಟ್ಸ್**) ನಿಯಂತ್ರಣಗಳು, 2015 ("ದಿ ಲಿಸ್ಟಿಂಗ್ ರೆಗ್ಯುಲೇಶನ್ಸ್), ಮತ್ತು ಸಾಮಾನ್ಯ ಸುತ್ತೋಲೆಗಳ ಸಂ. 20/2020 ದಿನಾಂಕ ಮೇ 05, 2020 ಮತ್ತು 09/2024 ದಿನಾಂಕ ಸೆಪ್ಟಂಬರ್ 19, 2024 ರಂದು ಕಾರ್ಪೊರೇಟ್ ವ್ಯಹಾರಗಳ ಸಚಿವಾಲಯ (**"ಎಂಸಿಎ ಸುತ್ತೋಲೆಗಳು"**) ಮತ್ತು ಸುತ್ತೋಲೆ ಸಂ. SEBI/HO/CFD/CFD -PoD-2/P/CIR/2024/133 ದಿನಾಂಕ ಅಕ್ಟೋಬರ್ 03, 2024 ಸೆಕ್ಯೂರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯ (**"ಸೆಬಿ ಸುತ್ತೋಲೆಗಳು"**) (ಎಲ್ಲವನ್ನೂ ಒಟ್ಟಾಗಿ **"ಸೂಕ್ತ ಸುತ್ತೋಲೆಗಳು" ಎನ್ನಲಾಗುವುದು**) 41ನೇ ಎಜಿಎಂ ಸೂಚನೆಯ ದಿನಾಂಕ ಆಗಸ್ಟ್ 12, 2025 (**"ಸೂಚನೆ"**) ಹೇಳಲಾದ ವ್ಯವಹಾರಗಳನ್ನು ನಡೆಸಲಾಗುವುದು.

ಮೇಲಿನ ಸುತ್ತೋಲೆಗಳಿಗೆ ಅನುಸಾರವಾಗಿ ಎಜಿಎಂನ ಸೂಚನೆ ಮತ್ತು 2024-25ರ ವಾರ್ಷಿಕ ವರದಿ ಮತ್ತು ಆರ್ಥಿಕ ಹೇಳಿಕೆಗಳು ಮತ್ತು ಇತರೆ ಶಾಸನಬದ್ಧ ವರದಿಗಳನ್ನು (**"ವಾರ್ಷಿಕ ವರದಿ"**) ಯನ್ನು ನಿಗದಿತ ಸಮಯದಲ್ಲಿ ವಿದ್ಯುನ್ಮಾನ ಮಾದರಿಯಲ್ಲಿರುವ ಕಂಪನಿ / ರಿಜಿಸ್ಟ್ರಾರ್ ಮತ್ತು ಷೇರು ಟ್ರಾನ್ಸ್‌ಫರ್ ಏಜೆಂಟ್/ ಡೆಪಾಸಿಟರಿ ಪಾರ್ಟಿಸಿಪೆಂಟ್ (**"ಡಿಪಿ"ಗಳು**) ಅಂದರೆ ನ್ಯಾಷನಲ್ ಸೆಕ್ಯುರಿಟೀಸ್ ಡೆಪಾಸಿಟರಿ ಲಿಮಿಟೆಡ್ (**"ಎನ್‌ಎಸ್‌ಡಿಎಲ್"**) ಮತ್ತು ಸೆಂಟ್ರಲ್ ಡೆಪಾಸಿಟರಿ ಸರ್ವಿಸಸ್ (ಇಂಡಿಯ) ಲಿಮಿಟೆಡ್ (**"ಸಿಡಿಎಸ್‌ಎಲ್"**) ಮತ್ತು /ಅಥವಾ ಕಂಪನಿಯ ರಿಜಿಸ್ಟ್ರಾರ್ ಮತ್ತು ಷೇರು ಟ್ರಾನ್ಸ್‌ಫರ್ ಏಜೆಂಟ್ (**"ಆರ್‌ಟಿಎ"**) ಅಂದರೆ ಎಂಯುಎಫ್‌ಜಿ ಇನ್‌ಟೈಮ್ ಇಂಡಿಯ ಪ್ರೈವೇಟ್ ಲಿಮಿಟೆಡ್ ಶುಕ್ರವಾರ, ಆಗಸ್ಟ್ 15, 2025 (**"ಕಟ್‌ಆಫ್ ದಿನಾಂಕ"**) ರವರಲ್ಲಿ ನೋಂದಾಯಿತವಾದ ಎಲ್ಲಾ ಷೇರುದಾರರಿಗೆ ಇ-ಮೇಲ್ ಮೂಲಕ ಕಳುಹಿಸಲಾಗುವುದು. ಕಂಪನಿಯು ಸೂಚನೆ ಮತ್ತು ವಾರ್ಷಿಕ ವರದಿಯ ಭೌತಿಕ ಪ್ರತಿಯನ್ನು ಕೋರಿಕೆಯ ಮೇರೆಗೆ companysecretary@se.com ಗೆ ತಮ್ಮ ಫೋಲಿಯೋ ಸಂ. /ಡಿಪಿ ಐಡಿ ಮತ್ತು ಕ್ಲೈಂಟ್ ಐಡಿ ಯನ್ನು ನಮೂದಿಸಿ ಕಳುಹಿಸಿದರೆ, ಅಂಥವರಿಗೆ ಭೌತಿಕ ಪ್ರತಿಯನ್ನು ಒದಗಿಸುತ್ತಿದೆ. ಆದಾಗ್ಯೂ, ಷೇರುದಾರರು ಪರಿಸರಪೂರಕವಾಗಿರುವ ಕಂಪನಿಯ ಇ-ಮೇಲ್ ಮೂಲಕವೇ ವ್ಯವಹಾರ ನಡೆಸಬೇಕೆಂದು, ನಾವು ಆಶಿಸುತ್ತೇವೆ.

ಕಂಪನಿಯು ಎನ್‌ಎಸ್‌ಡಿಎಲ್ ರವರ ಸೇವೆಯ ಮೂಲಕ ಎಜಿಎಂ ನಲ್ಲಿ ವಿಸಿ/ಒಎವಿಎಂ ಮೂಲಕ ಮತದಾನದ ವ್ಯವಸ್ಥೆ (ರಿಮೋಟ್ ಇ-ವೋಟಿಂಗ್ ಮತ್ತು ಎಜಿಎಂ ಸಂದರ್ಭದಲ್ಲಿ ಇ-ವೋಟಿಂಗ್) ನಡೆಸಲಿದೆ. ಸದಸ್ಯರು ವಿಸಿ/ಒಎವಿಎಂ ಮೂಲಕ ಮಾತ್ರವೇ ಎಜಿಎಂ ಗೆ ಹಾಜರಾಗಬಹುದು. ಎಜಿಎಂ ಹಾಜರಾಗಲು ಸೂಚನೆಯ ವಿವರವಾದ ಸೂಚನೆಗಳು ಮತ್ತು ಎಜಿಎಂ ಗೆ ಮೊದಲು ರಿಮೋಟ್ ಇ-ಮತದಾನ ಅಥವಾ ಎಜಿಎಂ ಸಂದರ್ಭದಲ್ಲಿ ಮತದಾನದ ಬಗ್ಗೆ ಸೂಚನೆಯಲ್ಲಿ ನೀಡಲಾಗಿದೆ.

ಸದಸ್ಯರು ತಮ್ಮ ಇ-ಮೇಲ್ ಐಡಿಯನ್ನು ನೋಂದಾಯಿಸದೆ ಇದ್ದು, ಸೂಚನೆ ಮತ್ತು ವಾರ್ಷಿಕ ವರದಿ ಮತ್ತು ಇತರೆ ಎಲ್ಲಾ ಸಂವಹನಗಳನ್ನು ಕಂಪನಿಯಿಂದ ಕಾಲಾನುಕಾಲಕ್ಕೆ ಸ್ವೀಕರಿಸಬೇಕೆಂದು ಬಯಸಿದಲ್ಲಿ, ತಾವು ನಮೂನೆ ಐಎಸ್‌ಆರ್-1 ರಿಂದ ಆರ್‌ಟಿಎ ಗೆ rnt.helpdesk@in.mpms.mufg.com ಅಥವಾ ಕಂಪನಿ ಕಾರ್ಯದರ್ಶಿ companysecretary@se.com ಗೆ ನೋಂದಾಯಿಸಿಕೊಳ್ಳಬಹುದು. ಆದಾಗ್ಯೂ, ಡಿಮ್ಯಾಟ್ ರೂಪದಲ್ಲಿ ಷೇರುಗಳನ್ನು ಹೊಂದಿರುವ ಷೇರುದಾರರು ತಮ್ಮ ಫೋಲಿಯೋ ಸಂ. / ಡಿಪಿ ಐಡಿ ಮತ್ತು ಕ್ಲೈಂಟ್ ಐಡಿ ಯನ್ನು ನಮೂದಿಸಿ ಕಳುಹಿಸಿದರೆ, ಅಂಥವರಿಗೆ ಭೌತಿಕ ಪ್ರತಿಯನ್ನು ಅಥವಾ ತಮ್ಮ ಇ-ಮೇಲ್ ಐಡಿಯನ್ನು ಕಂಪನಿಯೊಂದಿಗೆ ನೊಂದಾಯಿಸಿಕೊಳ್ಳದೆ, ಎಜಿಎಂ ನಲ್ಲಿ ಭಾಗವಹಿಸಿ ರಿಮೋಟ್ ಇ-ಮತದಾನ ಅಥವಾ ರಿಮೋಟ್ ಇ-ಮತದಾನ ಪದ್ಧತಿಯಲ್ಲಿ ಸಭೆಯ ಸಂದರ್ಭದಲ್ಲಿ ಮಾಡಲು ಬಯಸಿದಲ್ಲಿ, ಅಂಥವರು ಎನ್‌ಎಸ್‌ಡಿಎಲ್ ಗೆ evoting@nsdl.com.com ಗೆ ಅಥವಾಕಂಪನಿ ಕಾರ್ಯದರ್ಶಿ companysecretary@se.com ಗೆ ಇ-ಮೇಲ್ ಮಾಡಿ ಪ್ರಕ್ರಿಯೆಯನ್ನು ಅನುಸರಿಸಿ, ಯೂಸರ್ ಐಡಿ ಮತ್ತು ಪಾಸ್‌ವರ್ಡ್‌ಗಳನ್ನು ಪಡೆದುಕೊಂಡು ರಿಮೋಟ್ ಇ-ವೋಟಿಂಗ್ ಮೂಲಕ ಮತ ಚಲಾಯಿಸಬಹುದು.

ಭೌತಿಕ ರೂಪದಲ್ಲಿ ಷೇರುಗಳನ್ನು ಹೊಂದಿರುವ ಷೇರುದಾರರಿಗೆ ಈ ಮೂಲಕ ಸೂಚಿಸುವುದೇನೆಂದರೆ, ಎಲ್ಲಾ ಫೋಲಿಯೋಗಳು ಕೆವೈಸಿ ದಾಖಲೆಗಳನ್ನು ಹೊಂದಿರುವುದನ್ನು ಕಡ್ಡಾಯ ಮಾಡಿರುತ್ತದೆ ಮತ್ತು ಷೇರುದಾರರು ತಮ್ಮ ಪ್ಯಾನ್, ಸಂಪರ್ಕ ಸಂಖ್ಯೆ ಮತ್ತು ಆರ್‌ಟಿಎ ನಾಮಿನಿಯನ್ನು ನಮೂದಿಸಲು ಕೋರಲಾಗಿದೆ.

ಸೂಚನೆ ಮತ್ತು ವಾರ್ಷಿಕ ವರದಿಗಳು ಕಂಪನಿಯ ವೆಬ್‌ಸೈಟ್ ಅಂದರೆ www.schneiderelectricpresident.com ನಲ್ಲಿ ಹಾಗೂ ಮೆಟ್ರೋಪಾಲಿಟನ್ ಸ್ಟಾಕ್ ಎಕ್ಸ್‌ಚೇಂಜ್ ಲಿಮಿಟೆಡ್ (ಎಂಎಸ್‌ಇಐ) www.msei.in ನಲ್ಲಿ ಲಭ್ಯವಿರುತ್ತದೆ.

ವಿಸಿ/ಒಎವಿಎಂ ಸೌಲಭ್ಯದ ಮೂಲಕಹಾಜರಾಗುವ ಸದಸ್ಯರನ್ನು ಸೆಕ್ಷನ್ 103 ರ ಕಾಯಿದೆಯಂತೆ ಕೋರಂ ಉದ್ದೇಶಕ್ಕಾಗಿ ಲೆಕ್ಕ ಹಾಕಲಾಗುವುದು.

ಮೇಲಿನ ಮಾಹಿತಿಗಳು ಎಲ್ಲಾ ಸದಸ್ಯರ ಮಾಹಿತಿ ಉದ್ದೇಶಕ್ಕಾಗಿ ಮತ್ತು ಸೂಕ್ತ ಸುತ್ತೋಲೆಗಳ ಅನುಸಾರ ನೀಡಲಾಗಿದೆ.

ಪ್ರಮುಖ ಮಾಹಿತಿ:

ಎ) **ಭೌತಿಕ ಷೇರುಗಳಿಗೆ ವರ್ಗಾವಣೆ ವಿನಂತಿಗಳ ಮರು-ನಿವೇಶನಕ್ಕಾಗಿ ವಿಶೇಷ ವಿಂಡೋ ತೆರೆಯುವಿಕೆ:** ಜುಲೈ 02, 2025 ರ ಸೆಬಿ ಸುತ್ತೋಲೆ ಸಂಖ್ಯೆ SEBI/HO/MIRSD/MIRSD-PoD/P/CIR/2025/97 ರ ಪ್ರಕಾರ, ಏಪ್ರಿಲ್ 01, 2019 ರ ಗಡುವಿನ ಮೊದಲು ಸಲ್ಲಿಸಲಾದ ಮತ್ತು ದಾಖಲೆಗಳು/ಪ್ರಕ್ರಿಯೆಯಲ್ಲಿನ ಕೊರತೆಯಿಂದಾಗಿ ತಿರಸ್ಕರಿಸಲ್ಪಟ್ಟ/ ಹಿಂದಿರುಗಿಸಲಾದ/ಪರಿಗಣಿಸದ ಭೌತಿಕ ಷೇರುಗಳ ವರ್ಗಾವಣೆ ವಿನಂತಿಗಳನ್ನು ಮರು-ನಿವೇಶನ ಮಾಡಲು/ ಅಥವಾ ತಾವು ಸ್ವತಃ ಅಗತ್ಯ ದಾಖಲೆಗಳನ್ನು ಕಂಪನಿಗೆಯ ಆರ್‌ಟಿಎ ಗೆ ಜುಲೈ 07, 2025 ರಿಂದ ಜನವರಿ 06, 2026 ರವರೆಗೆ ಸಲ್ಲಿಸಲು ಆರು (06) ತಿಂಗಳುಗಳ ಕಾಲ ವಿಶೇಷ ವಿಂಡೋವನ್ನು ತೆರೆಯಲಾಗಿದೆ.

ಬಿ) **100 ದಿನಗಳ ಅಭಿಯಾನ – "ಸಕ್ಷಮ್ ನಿವೇಶಕ್":** ಎಂಸಿಎ ಅಡಿಯಲ್ಲಿ ಹೂಡಿಕೆದಾರರ ಶಿಕ್ಷಣ ಮತ್ತು ರಕ್ಷಣಾ ನಿಧಿ ಪ್ರಾಧಿಕಾರ (ಐಇಪಿಎಫ್‌ಎ), ಹೂಡಿಕೆದಾರರ ಜಾಗೃತಿಯನ್ನು ಹೆಚ್ಚಿಸಲು ಮತ್ತು ಹಕ್ಕು ಪಡೆಯದ ಲಾಭಾಂಶಗಳು ಮತ್ತು ಷೇರುಗಳ ಮರುಪಡೆಯುವಿಕೆಯನ್ನು ಸುಗಮಗೊಳಿಸಲು ಜುಲೈ 28, 2025 ರಿಂದ ನವೆಂಬರ್ 06, 2025 ರವರೆಗೆ "ಸಕ್ಷಮ್ ನಿವೇಶಕ್" ಎಂಬ ಶೀರ್ಷಿಕೆಯ ರಾಷ್ಟ್ರವ್ಯಾಪಿ 100 ದಿನಗಳ ಅಭಿಯಾನವನ್ನು ಪ್ರಾರಂಭಿಸಿದೆ. ಕಂಪನಿಯಿಂದ ಸಕಾಲಿಕ ಮತ್ತು ಪರಿಣಾಮಕಾರಿ ಸಂವಹನವನ್ನು ಖಚಿತಪಡಿಸಿಕೊಳ್ಳಲು ಕಂಪನಿಯ ಷೇರುದಾರರು ಅಭಿಯಾನದ ಅವಧಿಯೊಳಗೆ ತಮ್ಮ ಕೆವೈಸಿ ವಿವರಗಳು, ಬ್ಯಾಂಕ್ ಆದೇಶಗಳು ಮತ್ತು ಇಮೇಲ್ ವಿಳಾಸಗಳ ನೋಂದಣಿ ಸೇರಿದಂತೆ ಸಂಪರ್ಕ ಮಾಹಿತಿಯನ್ನು ನವೀಕರಿಸಲು ಪ್ರೋತ್ಸಾಹಿಸಲಾಗುತ್ತದೆ. ಇದು ಕಂಪನಿಯು ಭವಿಷ್ಯದಲ್ಲಿ ಲಾಭಾಂಶವನ್ನು ಸರಿಯಾದ ಹಕ್ಕುದಾರರಿಗೆ ನೇರವಾಗಿ ಪಾವತಿಸಲು ಅನುವು ಮಾಡಿಕೊಡುತ್ತದೆ, ವರ್ಗಾವಣೆ ಅಥವಾ ಯಾವುದೇ ಹಕ್ಕು ಪಡೆಯದ ಮೊತ್ತವನ್ನು ಐಇಪಿಎಫ್ ಈ ಪ್ರಾಧಿಕಾರಕ್ಕೆ ತಪ್ಪಿಸುತ್ತದೆ.

ಸದಸ್ಯರು ವರ್ಗಾವಣೆ ವಿನಂತಿಯನ್ನು ಮರುಪೂರಣಗೊಳಿಸಲು ಮತ್ತು/ಅಥವಾ ಕಂಪನಿಯ ಆರ್‌ಟಿಎ ಗೆ rnt.helpdesk@in.mpms.mufg.com ನಲ್ಲಿ ಬರೆಯುವ ಮೂಲಕ ತಮ್ಮ ಏಜಅ ಅನ್ನು ಪೂರ್ಣಗೊಳಿಸಲು ವಿನಂತಿಸಲಾಗಿದೆ.

ಮೇಲಿನ ಮಾಹಿತಿಯನ್ನು ಕಂಪನಿಯ ಎಲ್ಲಾ ಸದಸ್ಯರ ಮಾಹಿತಿ ಮತ್ತು ಪ್ರಯೋಜನಕ್ಕಾಗಿ ನೀಡಲಾಗುತ್ತಿದೆ ಮತ್ತು ಇದು ಕಾನೂನಿಗೆ ಅನುಸಾರವಾಗಿದೆ.

ಮಂಡಳಿಯ ಆದೇಶದ ಮೇರೆಗೆ
ಸ್ನೇಯ್ಡರ್ ಎಲೆಕ್ಟ್ರಿಕ್ ಪ್ರೆಸಿಡೆಂಟ್ ಸಿಸ್ಟಮ್ಸ್ ಲಿಮಿಟೆಡ್ ಪರವಾಗಿ
ಸಹಿ/-
ಸ್ವಪ್ನ ಭಾಟಿಯಾ
ಕಂಪನಿ ಕಾರ್ಯದರ್ಶಿ ಮತ್ತು ಕಾಂಪ್ಲಯನ್ಸ್ ಅಧಿಕಾರಿ
ಸ. ಸಂಖ್ಯೆ : ಎ32349

ದಿನಾಂಕ: ಆಗಸ್ಟ್ 18, 2025
ಸ್ಥಳ: ಬೆಂಗಳೂರು

Life Is On | Schneider Electric

ಸೌಜನ್ಯ ಪ್ರಕರಣ ದಾರಿ ತಪ್ಪಿಸಿದ್ದು ಅವರೇ: ಗಿಳಿಯಾರ್

ಬೆಂಗಳೂರು: ಕೆಲವರಿಗೆ ತಮ್ಮ ವೈಯಕ್ತಿಕ ಕೆಲಸಗಳಿಗೆ ಪೆಟ್ಟುಬಿದ್ದಿದ್ದರಿಂದ ಧರ್ಮಸ್ಥಳಕ್ಕೆ ಶತ್ರುಗಳು ಸೃಷ್ಟಿಯಾದರು. ಸೌಜನ್ಯ ಅವರಿಗೆ ನ್ಯಾಯಕೊಡಿಸುತ್ತೇವೆ ಎಂದು ಹೇಳುತ್ತಿರುವವರಿಂದಲೇ ಸೌಜನ್ಯ ಪ್ರಕರಣ ದಾರಿ ತಪ್ಪಿದ್ದು ಎಂದು ಸಾಮಾಜಿಕ ಕಾರ್ಯಕರ್ತ ವಸಂತ ಗಿಳಿಯಾರ್ ಹೇಳಿದರು.

ನಗರದ ಟೌನ್ ಹಾಲ್‌ನಲ್ಲಿ ಪುಣ್ಯಕ್ಷೇತ್ರ ಸಂರಕ್ಷಣಾ ಸಮಿತಿ ವತಿಯಿಂದ ನಡೆದ ಧರ್ಮಸ್ಥಳದ ಮೇಲಿನ ಷಡ್ಯಂತ್ರ-ಸತ್ಯ ಮಿಥ್ಯಗಳ ವಿಚಾರಗೋಷ್ಠಿ ಯಲ್ಲಿ ಮಾತನಾಡಿದ ಅವರು, ಬಾಹುಬಲಿ ಮಸ್ತಕಾಭಿಷೇಕದ ಕಾರಣಕ್ಕೆ ಆದರ್ಶ ಗ್ರಾಮ ಕಲ್ಪನೆಯಲ್ಲಿ ಬೆಳ್ತಂಗಡಿ ಗ್ರಾಮವನ್ನಾಗಿ ಮಾಡಲು ಮುಂದಾದರು. ಈ ಯೋಜನೆಗೆ ಸೋಮನಾಥ ನಾಯಕ ಎಂಬುವವರು ಸೇರಿಕೊಳ್ಳುತ್ತಾರೆ. ಅಷ್ಟೊತ್ತಿಗೆ ಧರ್ಮಸ್ಥಳದ ಭಾಗದಲ್ಲಿ ಆಮಿಷಕ್ಕೆ ಒಳಗಾಗಿ ಹಲವರ ಮನೆಯಲ್ಲಿ ಶಿಲುಬೆ ಬಂದಿತ್ತು. ಅವರ ಮನೆಗೆ ಧರ್ಮಸ್ಥಳದಿಂದ ಆರ್ಥಿಕ ಶಕ್ತಿ ನೀಡಿ ವಾಪಸ್ ಹಿಂದು ಧರ್ಮಕ್ಕೆ ಕರೆತರಲಾಯಿತು ಎಂದು ಆರೋಪಿಸಿದರು. ಈ ವಿಚಾರದಲ್ಲಿ ಸೋಮನಾಥ ನಾಯಕ ಎಂಬುವವರು ತಮ್ಮ ಸ್ವಂತ ಎನ್‌ಜಿಒ ಮಾಡಿ, ವಿದೇಶದಿಂದ ಹಣ ವನ್ನು ತಂದರು. ಈ ವಿಚಾರ ಗೊತ್ತಾಗಿ ಹೆಗ್ಗಡೆಯ ವರು ಅವರನ್ನು ಕೆಲಸದಿಂದ ತೆಗೆದರು ಎಂದು ಮಾಹಿತಿ ನೀಡಿದರು.

ಮಹೇಶ್ ಶೆಟ್ಟಿ ತಿಮರೋಡಿ ಧರ್ಮಸ್ಥಳದ ಸುತ್ತಮುತ್ತಲಿನ ಜಾಗವನ್ನು ಕಬಳಿಸಲು ಮುಂದಾಗಿದ್ದರು. ಇದನ್ನು ಅನೇಕ ಕಾರಣಗಳಿಂದ ಬೇರೆ ಬೇರೆ ಜನರು ತಡೆದರು. ಆದರೆ ಇದೆಲ್ಲವನ್ನು ಧರ್ಮಸ್ಥಳದವರು ಮಾಡಿಸಿದ್ದಾರೆ ಎಂದು ತಿಳಿದಿದ್ದಾರೆ. ಮಹೇಶ್ ಶೆಟ್ಟಿ ಮತ್ತು ಸೋಮನಾಥ ನಾಯಕ, ಕಮ್ಯುನಿಸ್ಟರು ಸೇರಿ ಸುಳ್ಳಿನ ಮೇಲೆ ಸುಳ್ಳಿನ ಕಂತೆ ಕಟ್ಟಿ ಸೌಜನ್ಯ ಪ್ರಕರಣವನ್ನು ದಾರಿ ತಪ್ಪಿಸಿದರು. ಹಾಗೆ ಧರ್ಮಸ್ಥಳದ ಮೇಲೆ ಅಪಪ್ರಚಾರ ಮಾಡಿದರೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಹಿಂದು ಜಾಗರಣ ವೇದಿಕೆಯ ಜಗದೀಶ್ ಕಾರಂತ್, ಬರಹಗಾರ ವಿಕಾಸ್ ಪುತ್ತೂರು, ಕರ್ನಾಟಕ ಹೈಕೋರ್ಟಿನ ಹಿರಿಯ ನ್ಯಾಯವಾದಿ ಅರುಣ್ ಶ್ಯಾಮ್, ತಿರುಪತಿ ತಿರುಮಲ ಟ್ರಸ್ಟ್‌ನ ಸದಸ್ಯ ನರೇಶ್ ಕುಮಾರ್, ವಿಶ್ವವಾಣಿ ಮಂಗಳೂರು ವರದಿಗಾರ ಜಿತೇಂದ್ರ ಕುಂದೇಶ್ವರ, ಪತ್ರಕರ್ತ ಕೀರ್ತಿ ಶಂಕರಘಟ್ಟ, ಗಿರೀಶ್ ಭಾರದ್ವಾಜ್ ಸೇರಿ ಪ್ರಮುಖರು ಭಾಗವಹಿಸಿದ್ದರು.

ಧಾರ್ಮಿಕ ಕ್ಷೇತ್ರಗಳ ಮೇಲೆ ನರೇಟಿವ್ ಟೇರರಿಸಂ

ಪುಣ್ಯಕ್ಷೇತ್ರಗಳ ತೇಜೋವಧೆ ಜೋರಾಗಿ ನಡೆಯುತ್ತಿದೆ. ಧರ್ಮಸ್ಥಳದ ವಿಚಾರವಾಗಿ ಷಡ್ಯಂತ್ರ ಮಾಡಿದವರ ಅವನತಿ ಆರಂಭವಾಗಿದೆ. ಭಾರತವನ್ನು ಒಗ್ಗೂಡಿಸುವಲ್ಲಿ ದೇವಸ್ಥಾನಗಳು ಮಹತ್ವದ ಪಾತ್ರವಹಿಸಿವೆ ಮತ್ತು ವಹಿಸುಸುತ್ತಿವೆ. ಆದರೆ ಈಗ ಧಾರ್ಮಿಕ ಕ್ಷೇತ್ರಗಳ ಮೇಲೆ ನರೇಟಿವ್ ಟೇರರಿಸಂ ನಡೆಸಲಾಗುತ್ತಿದೆ. ಹಿಂದೂ ದೇವಾಲಯಗಳ ಮೇಲೆ ಅಪನಂಬಿಕೆ ಬರುವ ಥರ ಮಾಡುವುದು ಇದರ ಉದ್ದೇಶವಾಗಿದೆ ಎಂದು ನ್ಯಾಯವಾದಿ ಗಿರೀಶ್ ಭಾರದ್ವಾಜ್ ಹೇಳಿದರು.

ನಗರದ ಟೌನ್ ಹಾಲ್‌ನಲ್ಲಿ ಪುಣ್ಯಕ್ಷೇತ್ರ ಸಂರಕ್ಷಣಾ ಸಮಿತಿ ವತಿಯಿಂದ ನಡೆದ ಧರ್ಮಸ್ಥಳದ ಮೇಲಿನ ಷಡ್ಯಂತ್ರ-ಸತ್ಯ ಮಿಥ್ಯಗಳ ವಿಚಾರಗೋಷ್ಠಿಯನ್ನು ಮಂಜುನಾಥಸ್ವಾಮಿ ಫೋಟೊಗೆ ದೀಪ ಹಚ್ಚುವ ಮೂಲಕ ಉದ್ಘಾಟಿಸಲಾಯಿತು.

IN THE COURT OF THE HON'BLE VIII ADDL CITY CIVIL JUDGE AT BANGALORE (CCH-15)
O S. NO. 7991/2023
BETWEEN : THE STATE BANK OF INDIA
Rajajinagar 1st Block Branch, PB No 1027, 14th Main, Rajajinagar 1st Block, Bengalore 560010.
Rep. Manager Mr. Gowtham P Adiga ...**PLAINTIFF**
AND: Mohammad Yusuf Mullanavar ...**DEFENDANT**
SUMMONS TO DEFENDANT BY WAY OF PAPER PUBLICATION
Mr. Mohammad Yusuf Mullanavar S/o. Mohammed Shafi, Aged abut: Major SJR House, Opp ICICI Bank, Shashikiran Complex, 12th Main, Rajaji Nagar 1st Block, Bangalore - 560010
Whereas, the Plaintiff has filed a suit Recovery of money instituted the present suit, for sum of Rs.2,37,593/- (Rupees Two Lakh Thirty Seven Thousand Five Hundred And Ninety Three Only) and future interest at contractual rate together with other applicable expenses, charges from the date of NPA till closure of loan. Hence you are hereby summoned to appear before court, person or through a Pleader on **19/9/25 at 11 A.M.** to answer the same failing which suit will be disposed of ex-parte.
Given under my hand and the seal of the court this 12th day of August 2025.
By the Order of Court
Sd/- Senior Sheristedar
City Civil Court, Bengaluru.
Advocate for Plaintiff
J. SATHISH KUMAR, (ADVOCATE)
EWS No.16/2, 1st Cross, 2nd Main, 2nd Stage, KHB (A.D. Halli), Basaveshwaranagar, Bangalore-560079. Mobile: 9740905079

ರಾತ್ರೋರಾತ್ರಿ ಅಭಿಪ್ರಾಯ ಬದಲಾಗಲು ಸಿಎಂ ಮೇಲೆ ಒತ್ತಡ ಹೇರಿದ್ವಾರು ಗೊತ್ತಾಗಲಿ

ದೂರುದಾರನ ಹಿಂದಿರುವ ವ್ಯಕ್ತಿಗಳ ತನಿಖೆ ಆಗಲಿ

ಬೆಂಗಳೂರು: ಧರ್ಮಸ್ಥಳದ ವಿಚಾರದ ದೂರುದಾರ, ದೂರುದಾರನ ಹಿಂದಿರುವ ವ್ಯಕ್ತಿಗಳ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಮುಖ್ಯಮಂತ್ರಿ ಅವರು ಶನಿವಾರ ರಾತ್ರಿ ಹೇಳಿಕೆ ಕೊಟ್ಟು ಯಾವುದೇ ಕಾರಣಕ್ಕೂ ಎಸ್‌ಐಟಿ ರಚಿಸುವುದಿಲ್ಲ ಎಂದಿದ್ದರು. ಮರುದಿನವೇ ಅಂದರೆ, ಭಾನುವಾರ ಬೆಳಗ್ಗೆ ಎಸ್‌ಐಟಿ ರಚನೆಯ ಹೇಳಿಕೆ ಕೊಟ್ಟಿದ್ದರು. ರಾತ್ರೋರಾತ್ರಿ ಮುಖ್ಯಮಂತ್ರಿಗಳ ಅಭಿಪ್ರಾಯ ಬದಲಾಗಲು ಅವರ ಮೇಲೆ ಒತ್ತಡ ಹೇರಿದ್ದು ಯಾರು ಎಂದು ಸದನದಲ್ಲೇ ಪ್ರಶ್ನಿಸಿದ್ದೆ. ಒತ್ತಡ ಹೇರಿದ ಸಂಘಟನೆಗಳು ಯಾವುವು ಎಂಬ ಕುರಿತು ಸದನದ ಗಮನಕ್ಕೆ ತರಬೇಕು, ಮುಖ್ಯಮಂತ್ರಿಗಳು ಉತ್ತರಿಸಬೇಕೆಂದು ಕೋರಿದ್ದಾಗಿ ತಿಳಿಸಿದರು.

ಮುಸುಕುಧಾರಿಯು ಧರ್ಮಸ್ಥಳದ ವಿಷಯದಲ್ಲಿ ಸಾಕಷ್ಟು ಪ್ರಚಾರ ತೆಗೆದುಕೊಂಡು, ರಾಜ್ಯ ಸರಕಾರ ಎಸ್‌ಐಟಿ ಸ್ಥಾಪಿಸುವ ಮಟ್ಟಕ್ಕೂ ಹೋಗಿದ್ದ. ಕಳೆದ 2-3 ವಾರಗಳಿಂದ ತನಿಖೆಯ ಜೊತೆಗೇ ಧರ್ಮಸ್ಥಳ, ಮಂಜುನಾಥೇಶ್ವರನ ಕ್ಷೇತ್ರದ ಕುರಿತು ಸಾಕಷ್ಟು ಅಪಪ್ರಚಾರಗಳು ನಡೆದಿದ್ದವು. ರಾಜ್ಯ- ರಾಷ್ಟ್ರೀಯ ಮಾತ್ರವಲ್ಲದೇ ಅಂತರರಾಷ್ಟ್ರೀಯ ಮಟ್ಟದಲ್ಲೂ ಚರ್ಚೆಗೆ ಒಳಗಾಗಿತ್ತು ಎಂದರು.

ಕೋಟ್ಯಂತರ ಭಕ್ತರ ಭಾವನೆಗೆ ಧಕ್ಕೆ

ಮುಸುಕುಧಾರಿ ಈಗ ಯಾರೋ ಗುಂಪಿನ ಒತ್ತಡದ ಹಿನ್ನೆಲೆಯಲ್ಲಿ ಹೇಳಿಕೆ ನೀಡಿದ್ದು ಗೊತ್ತಾಗಿದೆ. ಎಸ್‌ಐಟಿ ರಚಿಸಿದ ಬಳಿಕ ಆಗಿರುವ ಅಪಪ್ರಚಾರದ ಕಾರಣ ಕೋಟ್ಯಂತರ ಭಕ್ತರ ಭಾವನೆಗಳಿಗೆ ಧಕ್ಕೆ ಉಂಟಾಗಿದೆ. ಅವರಿಗೆ ನೋವಾಗಿದೆ. ರಾಜ್ಯ ಸರಕಾರದ ಕ್ರಮ ಹಿಟ್ ಆಂಡ್ ರನ್ ಆಗಬಾರದು. ದೂರುದಾರ, ದೂರುದಾರನ ಹಿಂದಿರುವ ಪ್ರಭಾವಿ ವ್ಯಕ್ತಿಗಳೇ ಇರಬಹುದು. ಎಡಪಂಥೀಯ ಸಂಘಟನೆಗಳೇ ಇರಬಹುದು ಇವರೆಲ್ಲರ ಬಗ್ಗೆ ಸಮಗ್ರ ತನಿಖೆ ಆಗಬೇಕೆಂದು ಆಗ್ರಹಿಸಿದರು.

ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ. ಎಂ. ಎಫ್ ಸಿ. ಕನಕಪುರ
ಸಿ.ಮಿಸ್. ನಂ: 547/2025
ಅರ್ಜಿದಾರರು: ಶ್ರೀಮತಿ. ಶಾಂತ ಕೋಂ ಲೇಟ್ ಮುತ್ತುರಾಜು, ವಯಸ್ಸು 37 ವರ್ಷ ವಾಸ: ವಾರ್ಡ ನಂ. 13, ಎ.ಕೆ. ಕಾಲೋನಿ, ಮೆಳೆಕೋಟೆ, ಕನಕಪುರ ಟೌನ್, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ, ಹಾಲಿ ಬೆಂಗಳೂರು ದಕ್ಷಿಣ ಜಿಲ್ಲೆ, ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ನಗರ ಸಭೆ, ಕನಕಪುರ ತಾಲ್ಲೂಕು, ಕನಕಪುರ
ಪ್ರಕಟಣೆ
ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1ನೇ ಅರ್ಜಿದಾರರ ಮಾವ, 2 ರಿಂದ 4ನೇ ಅರ್ಜಿದಾರರ ತಾತ, 5 ಮತ್ತು 6ನೇ ಅರ್ಜಿದಾರರ ತಂದೆಯವರಾದ ಶ್ರೀ. ರಂಗಯ್ಯ ಬಿನ್ ಲೇಟ್ ರಂಗಯ್ಯರವರು ರಾಮನಗರ ಜಿಲ್ಲೆ, ಹಾಲಿ ಬೆಂಗಳೂರು ದಕ್ಷಿಣ ಜಿಲ್ಲೆ, ಕನಕಪುರ ತಾಲ್ಲೂಕು, ಕನಕಪುರ ಟೌನ್, ಎ.ಕೆ. ಕಾಲೋನಿ. ವಾರ್ಡ ನಂ.13, ಮೆಳೆಕೋಟೆ, ಇಲ್ಲಿ ದಿನಾಂಕ:26.08.2007 ರಂದು ಮರಣ ಹೊಂದಿರುತ್ತಾರೆ, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂ-ದರೆ ದಿನಾಂಕ 22/09/2025ರ ಬೆಳಿಗ್ಗೆ ಸರಿಯಾಗಿ 11-00 ಘಂಟೆಗೆ ನ್ಯಾಯಾಲು ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರು ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥಗೊಳಿಸಲಾಗುವುದು.
2025ರ ಆಗಸ್ಟ್ 07ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು,
ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಲಯ ಕನಕಪುರ
ಅರ್ಜಿದಾರರ ಪರ ವಕೀಲರು
ಮಂಜುನಾಥ.ಆರ್. ಮತ್ತು ದೀಪು. ಕೆ.ಪಿ
ವಕೀಲರು, ಕನಕಪುರ,
ದಿನಾಂಕ: 07/08/2025
ಸ್ಥಳ: ಕನಕಪುರ

ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ. ಎಂ. ಎಫ್ ಸಿ. ಕನಕಪುರ
ಸಿ.ಮಿಸ್. ನಂ: 548/2025
ಅರ್ಜಿದಾರರು: ಶ್ರೀಮತಿ. ಶಾಂತ ಕೋಂ ಲೇಟ್ ಮುತ್ತುರಾಜು, ವಯಸ್ಸು 37 ವರ್ಷ ವಾಸ: ವಾರ್ಡ ನಂ. 13, ಎ.ಕೆ. ಕಾಲೋನಿ, ಮೆಳೆಕೋಟೆ, ಕನಕಪುರ ಟೌನ್, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ, ಹಾಲಿ ಬೆಂಗಳೂರು ದಕ್ಷಿಣ ಜಿಲ್ಲೆ, ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ನಗರ ಸಭೆ, ಕನಕಪುರ ತಾಲ್ಲೂಕು, ಕನಕಪುರ
ಪ್ರಕಟಣೆ
ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1ನೇ ಅರ್ಜಿದಾರರ ಮೈದುನ, 2 ರಿಂಧ 4ನೇ ಅರ್ಜಿದಾರರ ಚಿಕ್ಕಪ್ಪ, 5 ಮತ್ತು 6ನೇ ಅರ್ಜಿದಾರರ ಸಹೋದರನವರಾದ ಶ್ರೀ ಶ್ರೀನಿವಾಸ ಬಿನ್ ಲೇಟ್ ರಂಗಯ್ಯ.ಹೆಚ್ ರವರು ರಾಮನಗರ ಜಿಲ್ಲೆ, ಹಾಲಿ ಬೆಂಗಳೂರು ದಕ್ಷಿಣ ಜಿಲ್ಲೆ, ಕನಕಪುರ ತಾಲ್ಲೂಕು, ಕನಕಪುರ ಟೌನ್, ಎ.ಕೆ. ಕಾಲೋನಿ. ವಾರ್ಡ ನಂ.13, ಮೆಳೆಕೋಟೆ, ಇಲ್ಲಿ ದಿನಾಂಕ:16.06.2024 ರಂದು ಮರಣ ಹೊಂದಿರುತ್ತಾರೆ, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂ-ದರೆ ದಿನಾಂಕ 22/09/2025ರ ಬೆಳಿಗ್ಗೆ ಸರಿಯಾಗಿ 11-00 ಘಂಟೆಗೆ ನ್ಯಾಯಾಲು ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರು ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥಗೊಳಿಸಲಾಗುವುದು.
2025ರ ಆಗಸ್ಟ್ 07ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು,
ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಲಯ ಕನಕಪುರ
ಅರ್ಜಿದಾರರ ಪರ ವಕೀಲರು
ಮಂಜುನಾಥ.ಆರ್. ಮತ್ತು ದೀಪು. ಕೆ.ಪಿ
ವಕೀಲರು, ಕನಕಪುರ,
ದಿನಾಂಕ: 07/08/2025
ಸ್ಥಳ: ಕನಕಪುರ

ಅಶ್ವತ್ಥ್ ಜಾಮೀನು ತಾತ್ಕಾಲಿಕವಾಗಿ ರದ್ದುಪಡಿಸಿ ಹೈಕೋರ್ಟ್ ಆದೇಶ

ಯೋಗೀಶ್ ಗೌಡ ಕೊಲೆ ಆರೋಪಿಯ ಬೇಲ್ ರದ್ದು

ಬೆಂಗಳೂರು: ಧಾರವಾಡ ಜಿಲ್ಲೆಯ ಹೆಬ್ಬಳ್ಳಿಯ ಜಿಲ್ಲಾ ಪಂಚಾಯತ್ ಸದಸ್ಯರಾಗಿದ್ದ ಯೋಗೀಶ್ ಗೌಡ ಕೊಲೆ ಪ್ರಕರಣದ ಆರೋಪಿಯಾಗಿದ್ದ ಅಶ್ವತ್ಥ್ ಜಾಮೀನನ್ನು ಹೈಕೋರ್ಟ್ ತಾತ್ಕಾಲಿಕವಾಗಿ ರದ್ದುಪಡಿಸಿ ಆದೇಶ ಹೊರಡಿಸಿದೆ.

ಬಿಜೆಪಿ ಸದಸ್ಯ ಯೋಗೀಶ್‌ಗೌಡ ಕೊಲೆ ಪ್ರಕರಣದ ಒಂಬತ್ತನೇ ಆರೋಪಿ ಅಶ್ವತ್ಥ್ ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಐ. ಅರುಣ್ ಅವರ ಏಕಸದಸ್ಯ ಪೀಠ ಈ ಆದೇಶ ನೀಡಿದೆ. ಅಲ್ಲದೆ, ಪ್ರಕರಣ ಸಂಬಂಧ ಇತರೆ ಸಾಕ್ಷಿಗಳ ಸಂಖ್ಯೆಗಳಾದ 10, 30 ಮತ್ತು 40ರ ವಿಚಾರಣೆ ಪೂರ್ಣಗೊಳ್ಳುವವರೆಗೂ ಜೈಲಿನಲ್ಲಿರಬೇಕು. ಅವರ ವಿಚಾರಣೆ ಪೂರ್ಣಗೊಂಡ ಬಳಿಕ ಮತ್ತೊಮ್ಮೆ ಜಾಮೀನು ಕೋರಿ ಅರ್ಜಿ ಸಲ್ಲಿಸಬಹುದು ಎಂದು ನ್ಯಾಯಪೀಠ ತಿಳಿಸಿದೆ.

ವಿಚಾರಣೆ ವೇಳೆ ವಿಶೇಷ ಸರ್ಕಾರಿ ಅಭಿಯೋಜಕರು, ಪ್ರಾಸಿಕ್ಯೂಷನ್ ಸಾಕ್ಷಿಯಾಗಿರುವ ಬಸವರಾಜ ಮುತ್ತಗಿಗೆ ಅಶ್ವತ್ಥ್ ಜೀವ ಬೆದರಿಕೆ ಹಾಕಿದ್ದಾನೆ. ಮತ್ತೊಬ್ಬ ಸಾಕ್ಷಿಗೂ ಕೋರ್ಟ್ ಆವರಣದಲ್ಲೇ ಅಶ್ವತ್ಥ್ ಬೆದರಿಕೆ ಹಾಕಿದ್ದಾನೆ. ಸಿವಿಲ್ ನ್ಯಾಯಾಲಯದ ಸಿಸಿಟಿವಿಯಲ್ಲಿ ಅಶ್ವತ್ಥ್ ಬೆದರಿಕೆ ಹಾಕಿರುವ ದೃಶ್ಯ ಸೆರೆಯಾಗಿದೆ ಎಂದು ವಾದಿಸಿದ್ದರು. ಪ್ರಕರಣ ಸಂಬಂಧ ಇತ್ತೀಚೆಗೆ ಧಾರವಾಡದ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರ ಜಾಮೀನನ್ನು ಸುಪ್ರೀಂಕೋರ್ಟ್ ರದ್ದುಪಡಿಸಿತ್ತು.

ಪ್ರಕರಣದ ಹಿನ್ನೆಲೆ

ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯರಾಗಿದ್ದ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಪ್ರಮುಖ ಆರೋಪಿ. ಪ್ರಕರಣದ ತನಿಖೆ ಸಿಬಿಐಗೆ ವಹಿಸಲಾಗಿದ್ದು, ಕುಲಕರ್ಣಿಯನ್ನು ಬಂಧಿಸಿ ವಿಚಾರಣೆ ನಡೆಸಲಾಗಿತ್ತು. 9 ತಿಂಗಳ ಕಾಲ ಬೆಳಗಾವಿಯ ಹಿಂಡಲಗಾ ಜೈಲಿನಲ್ಲಿದ್ದ ವಿನಯ್ ಕುಲಕರ್ಣಿಗೆ ಷರತ್ತು ವಿಧಿಸಿ ಸುಪ್ರೀಂಕೋರ್ಟ್ ಜಾಮೀನು ಮಂಜೂರು ಮಾಡಿತ್ತು. ಈ ನಡುವೆ ವಿನಯ್ ಕುಲಕರ್ಣಿಗೆ ಮಂಜೂರಾಗಿದ್ದ ಜಾಮೀನನ್ನು ಸುಪ್ರೀಂಕೋರ್ಟ್ ರದ್ದುಪಡಿಸಿ ಆದೇಶಿಸಿತ್ತು. ಇದೇ ಪ್ರಕರಣದ ಮತ್ತೊಬ್ಬ ಆರೋಪಿ ಅಶ್ವತ್ಥ್ ಎಂಬುವರಿಗೆ ಮಂಜೂರಾಗಿದ್ದ ಜಾಮೀನನ್ನು ರದ್ದುಪಡಿಸಬೇಕು ಎಂದು ಕೋರಿ ಸಿಬಿಐ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ, ಪ್ರಕರಣದ ಇತರೆ ಸಾಕ್ಷಿಗಳ ವಿಚಾರಣೆ ಪೂರ್ಣಗೊಳ್ಳುವವರೆಗೂ ಜಾಮೀನು ರದ್ದು ಮಾಡಿ ಆದೇಶಿಸಿದೆ.

ಸಮಾಚಾರ ಸಣ್ಣದಲ್ಲ

ಬಿಬಿಎಂಪಿ ಧೋರಣೆ ಖಂಡನೀಯ

ಬೆಂಗಳೂರು: ಆಸ್ತಿ ತೆರಿಗೆ ಪಾವತಿಯ ಕುರಿತಂತೆ ಬಿಬಿಎಂಪಿಯು ಸಾರ್ವಜನಿಕರಿಗೆ ನೀಡುತ್ತಿರುವ ನೋಟಿಸ್‌ಗಳಿಗೆ ಮೇಲ್ಮನವಿ ಸಲ್ಲಿಸುವ ವಿಧಾನದ ಬಗ್ಗೆ ಸಾಮಾಜಿಕ ಜಾಲತಾಣ ಗಳಲ್ಲಿ ಪ್ರಚುರಪಡಿಸಿರುವ ವಿಡಿಯೊ ಕೇವಲ ಆಂಗ್ಲ ಭಾಷೆಯಲ್ಲಿರುವುದು ಖಂಡನೀಯ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಖಂಡಿಸಿದ್ದಾರೆ. ಪಾಲಿಕೆಯ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ರಿಗೆ ಪತ್ರ ಬರೆದಿರುವ ಅವರು, ರಾಜ್ಯ ಸರಕಾರದ ಸ್ಥಳೀಯ ಸಂಸ್ಥೆಯಾಗಿ ಬಿಬಿಎಂಪಿ ತನ್ನ ಆಡಳಿತದಲ್ಲಿ ಕನ್ನಡಕ್ಕೆ ಮೊದಲ ಆದ್ಯತೆಯನ್ನು ಕಲ್ಪಿಸುವುದು ಪ್ರಧಾನ ಜವಾಬ್ದಾರಿ ಯಾಗಿದ್ದರೂ, ಕೇವಲ ಆಂಗ್ಲ ಭಾಷೆಯಲ್ಲಿ ಮಾಹಿತಿಯನ್ನು ದೊರಕಿಸಿರುವುದು ಸರಿಯಲ್ಲ. ಈ ನಿರ್ಲಕ್ಷ್ಯತೆಗೆ ಕಾರಣರಾದ ಅಧಿಕಾರಿಗಳ ಮೇಲೆ ಕೂಡಲೇ ಶಿಸ್ತಿನ ಕ್ರಮಕ್ಕೆ ಮುಂದಾಗುವುದಲ್ಲದೇ, ಯಾವುದೇ ಮಾಹಿತಿಗಳನ್ನು ಒದಗಿಸುವ ಸಂದರ್ಭದಲ್ಲಿ ಮೊದಲ ಆದ್ಯತೆ ಕನ್ನಡಕ್ಕಿರಬೇಕು ಎಂದು ಹೇಳಿದ್ದಾರೆ.

ಶೀಘ್ರ ಅರಣ್ಯ ರಕ್ಷಕರ ನೇಮಕ: ಈಶ್ವರ ಖಂಡ್ರೆ

ವಿಧಾನಪರಿಷತ್: ಅರಣ್ಯ ಇಲಾಖೆಯಲ್ಲಿ ಮುಂಚೂಣಿ ಸಿಬ್ಬಂದಿ ಕೊರತೆ ನೀಗಿಸಲು ಕ್ರಮ ವಹಿಸಲಾಗಿದ್ದು, ಈಗಾಗಲೇ 310 ಅರಣ್ಯ ವೀಕ್ಷಕರ ನೇಮಕಾತಿ ಮಾಡಲಾಗಿದ್ದು, 540 ಅರಣ್ಯ ರಕ್ಷಕರ (ಗಾರ್ಡ್) ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದ್ದಾರೆ. ವಿಧಾನ ಪರಿಷತ್ತಿನಲ್ಲಿ ಎಸ್.ಕೇಶವ ಪ್ರಸಾದ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಕಾಡಾನೆ ದಾಳಿ, ಹುಲಿ ದಾಳಿ ಸೇರಿದಂತೆ ವನ್ಯಜೀವಿ ದಾಳಿಯಿಂದ ಮೃತಪಟ್ಟವರಿಗೆ ಪ್ರಸ್ತುತ 20 ಲಕ್ಷ ರು. ಪರಿಹಾರ ನೀಡಲಾಗುತ್ತಿದೆ. ಹಾವು ಕಚ್ಚಿ ಮೃತಪಟ್ಟವರಿಗೆ ಕೃಷಿ ಇಲಾಖೆಯ ವತಿಯಿಂದ 2 ಲಕ್ಷ ರು. ಪರಿಹಾರ ಒದಗಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳ ವಾಗಿದೆ. ಸರಕಾರ ಮಾನವ-ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ ಕ್ರಮ ಕೈಗೊಂಡಿದೆ. ದಕ್ಷಿಣ ಕನ್ನಡ ಜಿಲ್ಲೆಗೆ ಪ್ರತ್ಯೇಕವಾಗಿ ಆನೆ ಕಾರ್ಯಪಡೆಯನ್ನು ಮಂಜೂರು ಮಾಡಲು ಸೂಚಿಸಲಾಗಿದ್ದು, 2-3 ದಿನ ಗಳಲ್ಲಿ ಅಧಿಕೃತವಾಗಿ ಪ್ರಕಟಿಸಲಾಗುವುದು. ಈ ಪಡೆ ಯಲ್ಲಿ 32 ಸಿಬ್ಬಂದಿ ಇರುತ್ತಾರೆ. ಅವರು ಆನೆಗಳನ್ನು ಕಾಡಿಗೆ ಓಡಿಸುವ ಕಾರ್ಯದ ಜತೆಗೆ ಪುಂಡಾನೆ ಸೆರೆ ಕಾರ್ಯಾಚರಣೆಯಲ್ಲೂ ಸಹಕರಿಸಲಿದ್ದಾರೆ ಎಂದರು.

ಅನರ್ಹ ಎಪಿಎಲ್ ಕಾರ್ಡ್‌ಗಳಿಗೆ ಕತ್ತರಿ

ವಿಧಾನಪರಿಷತ್: ಬಿಪಿಎಲ್ ಪಡಿತರಚೀಟಿ ಒಳಗೆ ಸೇರ್ಪಡೆಯಾಗಿರುವ ಎಪಿಎಲ್ ಫಲಾನುಭವಿಗಳನ್ನು ತೆಗೆದು ಹಾಕುವ ಪ್ರಕ್ರಿಯೆ ಅಧಿವೇಶನ ಮುಗಿದ ನಂತರ ಪ್ರಾರಂಭಿಸಲಾಗುವುದು ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ. ಸದಸ್ಯರಾದ ಪ್ರತಾಪ್ ಸಿಂಹ ನಾಯಕ್ ಹಾಗೂ ಡಾ.ಯತೀಂದ್ರ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಕಳೆದ ಎರಡೂವರೆ ವರ್ಷಗಳಿಂದ ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗಿಲ್ಲ. ಇದಕ್ಕೆ ಕೆಲವು ತಾಂತ್ರಿಕ ಕಾರಣಗಳು ಇವೆ ಎಂದು ಸಚಿವರು ಒಪ್ಪಿಕೊಂಡರು. ದಕ್ಷಿಣ ಭಾರತದಲ್ಲಿ ಅತಿಹೆಚ್ಚು ಬಿಪಿಎಲ್ ಪಡಿತರ ಚೀಟಿಗಳನ್ನು ಹೊಂದಿರುವ ಫಲಾನುಭವಿಗಳ ಸಂಖ್ಯೆ ಕರ್ನಾಟಕದಲ್ಲಿ ಅತಿ ಹೆಚ್ಚು, ಮಹಾರಾಷ್ಟ್ರ, ಆಂಧ್ರಪ್ರದೇಶ, ತಮಿಳುನಾಡು, ತೆಲಂಗಾಣ, ಕೇರಳ ರಾಜ್ಯಗಳಲ್ಲಿ ಹೋಲಿಕೆ ಮಾಡಿದರೆ ನಮ್ಮಲ್ಲಿ 1.10 ಕೋಟಿ ಫಲಾನುಭವಿಗಳಿದ್ದಾರೆ. ಈ ಹಿಂದೆ ಬಿಪಿಎಲ್‌ನಲ್ಲಿ ಸೇರ್ಪಡೆಯಾಗಿದ್ದ 1,15,000 ಫಲಾನುಭವಿಗಳನ್ನು ತೆಗೆದು ಹಾಕಲು ಮುಂದಾದಾಗ ಅನೇಕ ತೊಂದರೆಗಳು ಎದುರಾದವು. ಒಂದು ವೇಳೆ ಅಂದು ತೆಗೆದು ಹಾಕಿದ್ದರೆ ಇಂದು ಬಿಪಿಎಲ್ ಅರ್ಹ ಫಲಾನುಭವಿಗಳಿಗೆ ನೀಡಲು ಅನುಕೂಲವಾಗುತ್ತಿತ್ತು. ಅಧಿವೇಶನ ಮುಗಿದ ನಂತರ ಅನರ್ಹರನ್ನು ತೆಗೆದು ಹಾಕಲಾಗುವುದು. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದರು.

ಕಸಾಪಗೆ ಕೈಲಾಸ ಪಾಟೀಲ್ ಸಂಘಟನಾ ಕಾರ್ಯದರ್ಶಿ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತಿನ ಸಂಘಟನಾ ಕಾರ್ಯದರ್ಶಿಯಾಗಿ ಕಲಬುರಗಿಯ ಕೈಲಾಸ ಪಾಟೀಲ್‌ರನ್ನು ಪರಿಷತ್ತಿನ ನಿಬಂಧನೆ 9 (3)ರಲ್ಲಿ ಅಧ್ಯಕ್ಷರಿಗೆ ದತ್ತವಾಗಿರುವ ಅಧಿಕಾರದ ನ್ವಯ ಕಸಾಪ ಅಧ್ಯಕ್ಷ ನಾಡೋಜ ಡಾ.ಮಹೇಶ ಜೋಶಿ ನಾಮ ನಿರ್ದೇಶನ ಮಾಡಿದ್ದಾರೆ.

{ **ಪ್ರಲ್ಹಾದ್ ಜೋಶಿ,** } ಕೇಂದ್ರ ಸಚಿವ

ಧರ್ಮಸ್ಥಳವನ್ನು ಬಿಜೆಪಿ ನಮ್ಮ ಸ್ವತ್ತು ಅಂತ ಹೇಳಿಲ್ಲ. ಕಾಂಗ್ರೆಸ್ ಸಮಸ್ತ ಹಿಂದೂ ಸಮಾಜದ ಸ್ವತ್ತಿನಲ್ಲಿ ಕೈ ಹಾಕುವ ಪ್ರಯತ್ನ ಮಾಡುತ್ತಿದೆ. ದೇಶದ ಗುಡಿ-ಗುಂಡಾರಗಳ ದುಡ್ಡು ಹೊಡೆಯುವ ಪ್ರಯತ್ನ ಮಾಡುತ್ತಿದೆ.

ವಿಮಾನ ನಿಲ್ದಾಣದಿಂದ ಬರುವವರಿಗೆ ತಪ್ಪಿದ ಸಂಚಾರ ದಟ್ಟಣೆ | ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ ಚಾಲನೆ

ಹೆಬ್ಬಾಳ ಮೇಲ್ಸೇತುವೆ ಸಾರ್ವಜನಿಕರ ಸಂಚಾರಕ್ಕೆ ಮುಕ್ತ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನಗರದ ಸಂಚಾರ ದಟ್ಟಣೆ ತಪ್ಪಿಸಲು ನಮ್ಮ ಸರಕಾರ ಮುಂದಡಿಯಿಟ್ಟಿದ್ದು, ಎಸ್ಟೀಮ್ ಮಾಲ್‌ನಿಂದ ಬ್ಯಾಪಿಸ್ಟ್ ಆಸ್ಪತ್ರೆವರೆಗೆ 1.5 ಕಿ.ಮೀ ಉದ್ದದ ಟನಲ್ ರಸ್ತೆಯನ್ನೂ ನಿರ್ಮಾಣ ಮಾಡಲಾಗುವುದು. ಇದರ ಸಾಧಕ- ಬಾಧಕ ಹಾಗೂ ಹಣಕಾಸಿನ ನೆರವಿನ ಬಗ್ಗೆ ಮುಖ್ಯಮಂತ್ರಿಗಳ ಬಳಿ ಚರ್ಚೆ ನಡೆಸಲಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ಹೆಬ್ಬಾಳದ ನೂತನ ಮೇಲ್ಸೇತುವೆಯನ್ನು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಉದ್ಘಾಟನೆ ಮಾಡಿದರು.

ಉದ್ಘಾಟನೆ ಬಳಿಕ ಉಪ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಕೆ.ಆರ್‌ಪುರದ ಕಡೆಯಿಂದ ಮೇಖ್ರಿ ಸರ್ಕಲ್ ಭಾಗದ ಲೂಪ್‌ನ್ನು 80 ಕೋಟಿ ರು. ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದ್ದು, ಇನ್ನೊಂದು ಭಾಗದ ಲೂಪ್‌ನ್ನು ನವೆಂಬರ್ ವೇಳೆಗೆ ಪೂರ್ಣಗೊಳಿಸಲಾಗುವುದು. ಒಟ್ಟು 300 ಕೋಟಿ ರು. ವೆಚ್ಚದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಎರಡು ಪಥಗಳು ಇರುವ ಕಡೆ ಆರು ಪಥಗಳು ಬರುವಂತೆ ಯೋಜನೆ ರೂಪಿಸಲಾಗಿದೆ. 17 ಸಾವಿರ ಕೋಟಿ ವೆಚ್ಚದಲ್ಲಿ 16.5 ಕಿ.ಮೀ ಉದ್ದದ ಟನಲ್ ರಸ್ತೆಗೆ ಟೆಂಡರ್ ಕರೆಯಲಾಗಿದೆ. ಹೆಬ್ಬಾಳ ಜಂಕ್ಷನ್ ನ ಮತ್ತೊಂದು ಲೂಪ್ ನಿರ್ಮಾಣವನ್ನು ತ್ವರಿತಗೊಳಿಸಲು ಬಿಡಿಎ ಅಧ್ಯಕ್ಷ ಹ್ಯಾರೀಸ್ ಜವಾಬ್ದಾರಿ ಹೊತ್ತುಕೊಂಡಿದ್ದಾರೆ ಎಂದು ಹೇಳಿದರು.

ಹೆಬ್ಬಾಳದ ನೂತನ ಮೇಲ್ಸೇತುವೆಯನ್ನು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಹಸಿರು ನಿಶಾನೆ ತೋರಿಸುವ ಮೂಲಕ ಉದ್ಘಾಟನೆ ಮಾಡಿದರು.

ವಿಮಾನ ನಿಲ್ದಾಣದಿಂದ ಬರುವವರಿಗೆ ಸೇರಿದಂತೆ ಎಲ್ಲರೂ ಸಂಚಾರ ದಟ್ಟಣೆ ಅನುಭವಿಸುತ್ತಾ ಇದ್ದರು. ಇದನ್ನು ತಪ್ಪಿಸಲು ನಮ್ಮ ಸರಕಾರ ಬದ್ಧವಾಗಿದ್ದು, ಹೆಬ್ಬಾಳ ಜಂಕ್ಷನ್ ನಿಂದ ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗೆ ಸಂಚಾರ ದಟ್ಟನೆ ನಿಯಂತ್ರಣಕ್ಕೆ ಏನೇನು ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿಗಳಿಗೆ ವಿವರಣೆ ನೀಡಿದ್ದೇನೆ ಎಂದರು.

ನಮಗೆ ಹಣ ಮುಖ್ಯವಲ್ಲ: ನಾನು ತುಂಬಾ ಪಾರದರ್ಶಕವಾಗಿದ್ದೇನೆ. ನನಗೆ ಕೆಲಸವಾಗುವುದು ಮುಖ್ಯವೇ ಹೊರತು ಹಣವಲ್ಲ. ಯುವ ಸಂಸದನೊಬ್ಬ ನಾವು ಹಣಕ್ಕಾಗಿ ಕೆಲಸ ಮಾಡುತ್ತಿದ್ದೇವೆ ಎಂದಿದ್ದಾನೆ. ನಮಗೆ ಹಣದ ಅಗತ್ಯವಿಲ್ಲ. ಅವರ (ಬಿಜೆಪಿ) ಅಧಿಕಾರಾವಧಿಯಲ್ಲಿ ಒಂದೇ ಒಂದು ಸಣ್ಣ ಕೆಲಸವನ್ನೂ ಮಾಡಿಲ್ಲ. ಅವರು ಒಂದೇ ಒಂದು ಕೆಲಸ ತೋರಿಸಲಿ. ಕೇಂದ್ರ ಸರಕಾರದಿಂದ ಒಂದೇ ಒಂದು ರುಪಾಯಿ ತರದಿರುವುದು ನಾಚಿಕೆಗೇಡಿನ ಸಂಗತಿ. ಬೆಂಗಳೂರು ಜಾಗತಿಕ ನಗರ, ಪ್ರಧಾನಿಯವರು ಕೂಡ ಇದನ್ನು ಒಪ್ಪಿಕೊಂಡಿದ್ದಾರೆ ಎಂದು ಹೇಳಿದರು.

ನೂತನ ಮೇಲ್ಸೇತುವೆಯಿಂದ ಮೇಖ್ರಿ ಸರ್ಕಲ್ ಬಳಿ ಸಂಚಾರ ದಟ್ಟಣೆ ಹೆಚ್ಚಲಿದೆ ಎನ್ನುವ ಟೀಕೆಯ ಬಗ್ಗೆ ಕೇಳಿದಾಗ, ಯಾರು ಯಾರೋ ಏನೇನೋ ಮಾತನಾಡುವವರಿಗೆಲ್ಲ ನಾವು ಉತ್ತರ ನೀಡಲು ಆಗುವುದಿಲ್ಲ. ಈ ಲೂಪ್ ಕಾಮಗಾರಿಯನ್ನು ಮುತುವರ್ಜಿವಹಿಸಿ ಮಾಡಲಾಗಿದೆ. ಏಕೆಂದರೆ ಒಂದು ಕಡೆ ಮೆಟ್ರೋ ಮಾರ್ಗ, ಇನ್ನೊಂದು ಕಡೆ ರೈಲ್ವೇ ಮಾರ್ಗವಿದ್ದು ಅತ್ಯಂತ ತಾಂತ್ರಿಕವಾಗಿ ಕಾಮಗಾರಿ ಪೂರ್ಣಗೊಳಿಸಲಾಗಿದೆ ಎಂದರು.

ರಾಜಕೀಯಕ್ಕೆ ಧರ್ಮಸ್ಥಳ ಹೆಸರು ಬಳಕೆ

ಬಿಜೆಪಿ ಧರ್ಮಸ್ಥಳ ವಿಚಾರದಲ್ಲಿ ಟೀಕೆ ಮಾಡುತ್ತಿರುವ ಬಗ್ಗೆ ಡಿಸಿಎಂ ಡಿಕೆಶಿ ಮಾತನಾಡಿ, ರಾಜಕೀಯದಲ್ಲಿ ಧರ್ಮವಿರಬೇಕೆ ಹೊರತು ಧರ್ಮದಲ್ಲಿ ರಾಜಕಾರಣವಿರಬಾರದು. ಬಿಜೆಪಿಯವರು ಧರ್ಮದಲ್ಲಿ ರಾಜಕಾರಣ ಮಾಡುತ್ತಿದ್ದಾರೆ. ತಮ್ಮ ರಾಜಕೀಯಕ್ಕೆ ಧರ್ಮ ಬಳಸಿಕೊಳ್ಳುತ್ತಿದ್ದಾರೆ ಎಂದರು. ಎಸ್ ಐಟಿ ಸರಕಾರಕ್ಕೆ ವರದಿ ಸಲ್ಲಿಸುವಿಕೆ ಕುರಿತು ಗೃಹಸಚಿವರು ಉತ್ತರಿಸುತ್ತಾರೆ ಎಂದರು.

ಫ್ಲೈ ಓವರ್‌ನಲ್ಲಿ ಬೈಕ್ ಓಡಿಸಿದ ಡಿಸಿಎಂ

ಡಿಸಿಎಂ ಡಿಕೆ ಶಿವಕುಮಾರ್ ಬೈಕ್ ಸವಾರಿ ಮಾಡಿದರು. ತಮ್ಮ ನೆಚ್ಚಿನ ಯೆಜ್ಡಿ-1981 ಬೈಕ್ ಹತ್ತಿ ಹೆಬ್ಬಾಳ ನೂತನ ಮೇಲ್ಸೇತುವೆ ಮೇಲೆ ಸವಾರಿ ಮಾಡಿ ತಮ್ಮ ಕಾಲೇಜು ದಿನಗಳನ್ನು ನೆನಪಿಸಿಕೊಂಡರು. ಪದವಿ ವ್ಯಾಸಂಗದ ಯಡ್ಡಿ ಬೈಕ್ ಖರೀದಿಸಿದ್ದರು. ಕಾಲೇಜು ದಿನಗಳಲ್ಲಿ ಬಳಸಿದ್ದ ಈ ಬೈಕ್‌ನ್ನು ಕಳೆದ ವರ್ಷ ಸೆಪ್ಟೆಂಬರ್ ನಲ್ಲಿ ಬೆಂಗಳೂರಿನ ಹಳೆಯ ಬೈಕ್ ನವೀಕರಣ ಮಾಡುವ ಯುವಕ ಸುಪ್ರೀತ್ ಅವರು ರೀ ಕಂಡೀಷನಿಂಗ್ ಮಾಡಿದ್ದರು.

ಸಾಹಸ ಸಿಂಹ ಹುಟ್ಟುಹಬ್ಬದ ದಿನದಂದೇ ಅಡಿಗಲ್ಲು: ವೀರಕಪುತ್ರ ಶ್ರೀನಿವಾಸ್

ಕೆಂಗೇರಿ ಬಳಿ ನಟ ವಿಷ್ಣುವರ್ಧನ್ ಸ್ಮಾರಕ

ಬೆಂಗಳೂರು: ಕೆಂಗೇರಿ ಬಳಿಯ ಅಭಿಮಾನ್ ಸ್ಟುಡಿಯೋದಲ್ಲಿದ್ದ ನಟ ವಿಷ್ಣು ವರ್ಧನ್ ಸಮಾಧಿ ತೆರವಿಗೆ ವಿಷ್ಣು ಅಭಿಮಾನಿಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಇದರ ಬೆನ್ನಲೇ ವಿಷ್ಣುವರ್ಧನ್ ಅಭಿಮಾನಿಗಳು ಮಹತ್ವದ ನಿರ್ಧಾರ ಪ್ರಕಟಿಸಿದ್ದಾರೆ.

ಕೆಂಗೇರಿ ಬಳಿಯೇ ವಿಷ್ಣುವರ್ಧನ್ ಅವರ ಸ್ಮಾರಕ ನಿರ್ಮಾಣ ಮಾಡಲು ನಿರ್ಧಾರ ಮಾಡಿದ್ದಾರೆ. ಸೆಪ್ಟೆಂಬರ್ 18ರಂದು ವಿಷ್ಣುವರ್ಧನ್ ಹುಟ್ಟುಹಬ್ಬದ ದಿನವೇ ಸ್ಮಾರಕ ನಿರ್ಮಾಣಕ್ಕೆ ಅಡಿಗಲ್ಲು ಹಾಕಲು ಅಭಿಮಾನಿಗಳು ಮುಂದಾಗಿದ್ದಾರೆ. ಕಿಚ್ಚ ಸುದೀಪ್ ಅವರಿಂದ ಸೆ.2 ರಂದು ಸ್ಮಾರಕದ ಮಾದರಿ ಬಿಡುಗಡೆ ನಿರ್ಧರಿಸಲಾಗಿದೆ.

ಈ ಕುರಿತು ವೀರಕಪುತ್ರ ಶ್ರೀನಿವಾಸ್ ಮಾತನಾಡಿದ್ದಾರೆ. ಸಾಹಸ ಸಿಂಹ ವಿಷ್ಣುವರ್ಧನ್ ಅಭಿಮಾನಿಗಳು ಅತಿ ದೊಡ್ಡ ಪ್ಲಾನ್ ಮಾಡಿದ್ದು, ಅಭಿಮಾನ್ ಸ್ಟುಡಿಯೋದಲ್ಲಿದ್ದ ವಿಷ್ಣುವರ್ಧನ್ ಅವರ ಸಮಾಧಿಯನ್ನು ಇತ್ತೀಚೆಗೆ ತೆರವುಗೊಳಿಸಲಾಗಿತ್ತು. ಸೆಪ್ಟೆಂಬರ್ 18ರಂದು ಅಮೃತಾ ಮಹೋತ್ಸವ ಕಾರ್ಯಕ್ರಮ ನಡೆಯಲಿದೆ. ಸೆಪ್ಟೆಂಬರ್ 2ರಂದು ನಟ ಕಿಚ್ಚ ಸುದೀಪ್ ಅವರ ಹುಟ್ಟುಹಬ್ಬ, ಕಿಚ್ಚ ಕೂಡ ವಿಷ್ಣುದಾದಾರ ಅಪ್ಪಟ ಅಭಿಮಾನಿ. ಸುದೀಪ್ ಅವರ ಹುಟ್ಟುಹಬ್ಬದಂದೇ ಸ್ಮಾರಕದ ಬ್ಲ್ಯೂಪ್ರಿಂಟ್ ಅನ್ನು ಅನಾವರಣ ಮಾಡಲಿದ್ದಾರೆ. ಸೆಪ್ಟೆಂಬರ್ 18ರಂದು ಸಾಹಸ ಸಿಂಹನ ಹುಟ್ಟುಹಬ್ಬದ ದಿನವೇ ಸ್ಮಾರಕಕ್ಕೆ ಅಡಿಗಲ್ಲು ಹಾಕಲಾಗುವುದು. ಕೆಂಗೇರಿ ಬಳಿ ನಿರ್ಮಾಣ ಆಗುವ ಸ್ಮಾರಕ, ಅಭಿಮಾನ್ ಸ್ಟುಡಿಯೊ ಪುಣ್ಯಭೂಮಿಗೆ ಪರ್ಯಾಯ ಅಲ್ಲ ಎಂದು ಹೇಳಿದರು.

ವಿಷ್ಣುವರ್ಧನ್ ಸಮಾಧಿ ತೆರವು ಹಿನ್ನೆಲೆ ವೀರಕಪುತ್ರ ಶ್ರೀನಿವಾಸ್ ನೇತೃತ್ವದಲ್ಲಿ ವಿಷ್ಣು ಅಭಿಮಾನಿಗಳ ಸಭೆ ನಡೆಯಿತು.

ಪುಣ್ಯಭೂಮಿಗಾಗಿ ಹೋರಾಟ

ಸೆ. 2ರಂದು ಕಿಚ್ಚ ಸುದೀಪ್ ಬರ್ತಡೇ ದಿನದಂದು ಸ್ಮಾರಕ ಹೇಗಿರಲಿದೆ ಎಂಬ ಮಾಡೆಲ್ ಪರಿಚಯಿಸುತ್ತೇವೆ. ಸೆ.18ಕ್ಕೆ ಸ್ಮಾರಕಕ್ಕೆ ಅಡಿಗಲ್ಲು ಹಾಕುತ್ತೇವೆ. ಇದು ಪುಣ್ಯಭೂಮಿಗೆ ಸಮ ಎಂದು ವಾದ ಮಾಡಲು ಹೋಗುವುದಿಲ್ಲ. ಮೈಸೂರಿನಲ್ಲಿರುವ ಸ್ಮಾರಕಕ್ಕೆ ಪ್ಯಾರೆಲ್ ಎಂದು ಹೇಳುವುದಿಲ್ಲ. ಅಸಂಖ್ಯಾತ ಭಾವನೆ ಬೆಸೆದ ಜಾಗವಿದು. ಪುಣ್ಯಭೂಮಿ ಉಳಿಸಿಕೊಳ್ಳುತ್ತೇವೆ. ಅದಕ್ಕಾಗಿ ಹೋರಾಟ ಮಾಡುತ್ತೇವೆ. ಕುಟುಂಬದವರು ಹೇಳಿದ್ದಾರೆ. ನೀವೆಲ್ಲರೂ ನಿರ್ಧಾರ ಮಾಡಿಕೊಂಡು ಬನ್ನಿ ಎಂದಿದ್ದಾರೆ. ಅದಕ್ಕಾಗಿ ರೂಪುರೇಷೆ ಸಿದ್ದ ಪಡಿಸುತ್ತಿದ್ದಾರೆ. ಬೆಂಗಳೂರಿನಲ್ಲಿ ದಾದಾ ಅವರ ದರ್ಶನ ಕೇಂದ್ರ ಮಾಡುತ್ತೇವೆ. ಅದು ಅರ್ಥಪೂರ್ಣ ಕೆಲಸಕ್ಕೆ ವೇದಿಕೆಯಾಗಲಿದೆ ವೀರಕಪುತ್ರ ಶ್ರೀನಿವಾಸ್ ಹೇಳಿದರು.

ರಾಧೆ ವೇಷದಲ್ಲಿ ಕಂಗೊಳಿಸಿದ ನವೀನ್ ಕುಮಾರ್-ಶ್ರಾವಣಿ ದಂಪತಿ ಪುತ್ರಿ ಪೂರ್ವಿಕಾ ಎನ್.ಗೌಡ .



ಕೃಷ್ಣನ ವೇಷದಲ್ಲಿ ಬೆಂಗಳೂರಿನ ಶ್ರೀಮತಿ ಶ್ವೇತಾ ವರುಣ್ ದಂಪತಿಗಳ ಪುತ್ರಿ ವರ.

ಬೆಂಗಳೂರಿನ ಸಂತ ಮಾರ್ಕ್ಸ್ ರಸ್ತೆಯಲ್ಲಿರುವ ಭಾರತೀಯ ಸ್ಟೇಟ್ ಬ್ಯಾಂಕ್, ಸ್ಥಳೀಯ ಪ್ರಧಾನ ಕಚೇರಿಯಲ್ಲಿ ಸ್ವಾತಂತ್ರ್ಯ ದಿನಾಚರಣೆಯನ್ನು ಯೋಗ್ಯ ರೀತಿಯಲ್ಲಿ ಆಚರಿಸಲಾಯಿತು. ಈ ವೇಳೆ ಎಸ್‌ಬಿಐ ಬೆಂಗಳೂರು ವೃತ್ತದ ಮುಖ್ಯ ಪ್ರಧಾನ ವ್ಯವಸ್ಥಾಪಕಿ ಜೂಹಿ ಸ್ಮಿತಾ ಸಿನ್ಹಾ, ಸೇರಿದಂತೆ ಅನೇಕರಿದ್ದರು.

ಸೂಟ್‌ಕೇಸ್‌ಗೆ 30 ರು. ಪಾವತಿಸಿದ ಪ್ರಯಾಣಿಕ

ಬೆಂಗಳೂರು: ನಮ್ಮ ಮೆಟ್ರೋದಲ್ಲಿ ಲಗೇಜ್‌ನ ತೂಕ ಅಧಿಕವಾಗಿದೆ ಎಂದು ಹೆಚ್ಚುವರಿ ಶುಲ್ಕ ವಿಧಿಸಿದ್ದು, ಪ್ರಯಾಣಿಕನೊಬ್ಬ ತನ್ನ ಲಗೇಜ್‌ಗೆ 30 ರು. ಹೆಚ್ಚುವರಿ ಶುಲ್ಕ ವಿಧಿಸಿದ್ದಾರೆ. ಹೆಚ್ಚುವರಿ ಲಗೇಜ್‌ಗೆ 30 ರು.ಶುಲ್ಕ ವಿಧಿಸಿರುವುದನ್ನು ಪ್ರಯಾಣಿಕರು ಖಂಡಿಸಿದ್ದು, ಈಗಾಗಲೇ ದುಬಾರಿ ಮೆಟ್ರೋ ಶುಲ್ಕದ ಜತೆಗೆ ಹೆಚ್ಚುವರಿ ಹೊರೆ ಹೇರುವುದು ಎಷ್ಟು ಸರಿ ಎಂದು ಪ್ರಯಾಣಿಕರು ಪ್ರಶ್ನಿಸಿದ್ದಾರೆ. ಅವಿನಾಶ್ ಚಂಚಲ್ ಎಂಬ ಪ್ರಯಾಣಿಕ, ತಾನು ಊರಿನಿಂದ ತೆಗೆದುಕೊಂಡು ಬಂದಿದ್ದ ಸೂಟ್‌ಕೇಸ್‌ಗೆ ನಮ್ಮ ಮೆಟ್ರೋದಲ್ಲಿ 30 ರು. ಕೊಡಬೇಕಾಗಿದೆ ಎಂದರೆ ನನಗೆ ಆಶ್ಚರ್ಯವಾಗುತ್ತಿದೆ. ಈಗಾಗಲೇ ದೇಶದಲ್ಲೇ ಬೆಂಗಳೂರು ಮೆಟ್ರೋ ತುಂಬಾ ದುಬಾರಿ. ಇದರ ಜತೆಗೆ ಈ ಹೆಚ್ಚುವರಿ ಶುಲ್ಕವನ್ನೂ ಸೇರಿಸಿದರೆ ಜನರು ಮೆಟ್ರೋವನ್ನು ಬಳಕೆ ಮಾಡುವುದನ್ನೇ ಬಿಟ್ಟು ಬಿಡುತ್ತಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ವಿರೋಧ ವ್ಯಕ್ತಪಡಿಸಿದ್ದಾರೆ.

ಪರ-ವಿರೋಧ ಚರ್ಚೆ ಆರಂಭ: ಸಾಮಾಜಿಕ ಜಾಲತಾಣದಲ್ಲಿ ಈ ಪೋಸ್ಟ್‌ಗೆ ಮಿಶ್ರ ಪ್ರತಿಕ್ರಿಯೆಯು ವ್ಯಕ್ತವಾಗಿದ್ದು, ದೊಡ್ಡ ಚೀಲಗಳಿಗೆ ಮೆಟ್ರೋದಲ್ಲಿ ಹೆಚ್ಚುವರಿ ಜಾಗ ಬೇಕಾಗುತ್ತದೆ. ಹೀಗಾಗಿ ಹೆಚ್ಚುವರಿ ಶುಲ್ಕ ವಿಧಿಸಿದರೆ ತಪ್ಪಿಲ್ಲ ಎಂದು ಕೆಲವರು ಹೇಳಿದ್ದರೆ, ಸ್ಕ್ಯಾನರ್‌ನಲ್ಲಿ ಹೊಂದಿಕೊಳ್ಳದ ಚೀಲಗಳಿಗೆ ಶುಲ್ಕ ವಿಧಿಸಬೇಕು ಅಂತ ಇನ್ನು ಕೆಲವರು ಅಭಿಪ್ರಾಯಪಟ್ಟಿದ್ದಾರೆ.

ಶಕ್ತಿ ಯೋಜನೆ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ಗೆ

ಬೆಂಗಳೂರು: ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯು ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ಗೆ ಸೇರ್ಪಡೆಯಾಗಿ ರುವುದು ಸಂತಸದ ಹಾಗೂ ಹೆಮ್ಮೆಯ ಕ್ಷಣವಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.



ಈ ಕುರಿತಂತೆ ಮಾಹಿತಿ ನೀಡಿರುವ ಅವರು, ಕರ್ನಾಟಕ ಸರಕಾರದ ಮಹತ್ವಾಕಾಂಕ್ಷೆ ಯೋಜನೆ ಹಾಗೂ ಮಹಿಳಾ ಸಬಲೀಕರಣದ ದಿಟ್ಟ ಯೋಜನೆ ಯಾಗಿರುವ ಶಕ್ತಿ ಯೋಜನೆಯು ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಪಡೆದಿದೆ. 2023ರ ಜೂನ್ 11 ರಿಂದ 2025 ಜುಲೈ 25ರ ಅವಧಿಯಲ್ಲಿ ನಾಲ್ಕು ನಿಗಮದ ಸಾರಿಗೆ ಬಸ್‌ಗಳಲ್ಲಿ 5049476416 ಮಹಿಳೆಯರು (500 ಕೋಟಿ) ಉಚಿತ ಟಿಕೆಟ್ ಪಡೆದು ಪ್ರಯಾಣ ಮಾಡಿದ್ದಾರೆ.

ಈ ಕಾರಣದಿಂದ ಶಕ್ತಿ ಯೋಜನೆ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಪಡೆದಿದೆ. ಶಕ್ತಿ ಯೋಜನೆ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಪಡೆದಿರುವುದು ಅತೀವ ಸಂತಸ ಮತ್ತು ಹೆಮ್ಮೆಯ ಕ್ಷಣವಾಗಿದೆ ಎಂದರು

> **ಮಹಿಳಾ ಸಬಲೀಕರಣದೆಡೆಗಿನ ದಿಟ್ಟ ಹೆಜ್ಜೆಯಾದ ಶಕ್ತಿ ಯೋಜನೆಯು ಚಾಲನೆಗೊಂಡ ದಿನದಿಂದ 504 ಕೋಟಿ 90 ಲಕ್ಷ ಬಾರಿ ಮಹಿಳಾ ಪ್ರಯಾಣಿಕರು ಉಚಿತವಾಗಿ ಸ್ವಾವಲಂಬಿ ಬದುಕಿನೆಡೆಗೆ ಪ್ರಯಾಣಿಸುವ ಮೂಲಕ ಈ ಇತಿಹಾಸ ಸೃಷ್ಟಿಸಿದ್ದಾರೆ. ಈ ಸಾಧನೆಯ ಶ್ರೇಯ ಉದ್ಯೋಗ, ಶಿಕ್ಷಣ, ವೈದ್ಯಕೀಯ ಚಿಕಿತ್ಸೆ ಮುಂತಾದ ಉದ್ದೇಶಗಳಿಗಾಗಿ ನಿತ್ಯ ಸಂಚರಿಸುವ ನಾಡಿನ ನನ್ನ ತಾಯಂದಿರಿಗೆ, ಅಕ್ಕ - ತಂಗಿಯರಿಗೆ ಸಲ್ಲಬೇಕು. ಶಕ್ತಿ ಯೋಜನೆಯು ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ, ಔದ್ಯೋಗಿಕವಾಗಿ ಮಹಿಳೆಯರನ್ನು ಸಬಲರನ್ನಾಗಿಸುತ್ತದೆ ಎಂಬ ನನ್ನ ನಂಬಿಕೆ ಈ ಮೂಲಕ ಹುಸಿಯಾಗಲಿಲ್ಲ. ಯೋಜನೆಯನ್ನು ಜಾರಿಗೆ ಕೊಟ್ಟ ನನಗಿದು ಅತ್ಯಂತ ಸಂತಸದ ಕ್ಷಣ.**
>
> **- ಸಿದ್ದರಾಮಯ್ಯ,** ಮುಖ್ಯಮಂತ್ರಿ

ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ: ಮಧು ಬಂಗಾರಪ್ಪ

